# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 135 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 09–12–2023 ಶನಿವಾರ | ಪುಟ: 4 | ಬೆಲೆ : ರೂ.2–00
Volume - 01 Issue - 135 | Title- Code: KARKAN 28269 | Chitradurga | Date: 09-12-2023 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಕೈಜೋಡಿಸಿ: ನ್ಯಾ.ಎಂ.ವಿಜಯ್ 2

ಸರ್ಕಾರಿ ವಿದ್ಯಾರ್ಥಿ ನಿಲಯ, ವಸತಿ ಶಾಲೆಗಳಿಗೆ ಜಿ.ಪಂ ಸಿಇಒ ಡಿಥೀರ್ ಭೇಟಿ 3

ಇಂದಿನಿಂದ ಮಾಜಿ ಮುಖ್ಯಮಂತ್ರಿ ನಿಜಲಿಂಗಪ್ಪನವರ ಸವಿನೆನಪಿನ ಸ್ಮರಣೆ 4



ಸುದ್ದಿ, ಜಾಹಿರಾತಿಗೆ 9686622252


## ಕನ್ನಡ ಚಿತ್ರರಂಗದ ಹಿರಿಯ ನಟಿ ಲೀಲಾವತಿ ಇನ್ನಿಲ್ಲ



» **ಬೆಂಗಳೂರು**

ಸ್ಯಾಂಡಲ್‌ವುಡ್‌ನ ಹಿರಿಯ ನಟಿ ಲೀಲಾವತಿ ಅವರು ವಿಧಿವಶರಾಗಿದ್ದಾರೆ. ಅವರಿಗೆ 85 ವರ್ಷ ವಯಸ್ಸಾಗಿತ್ತು. ವಯೋ ಸಹಜ ಖಾಯಿಲೆಯಿಂದ ಬಳಲುತ್ತಿದ್ದ ಅವರು ತಮ್ಮ ಸ್ವಗೃಹದಲ್ಲದೇ ಕೆಲವು ದಿನಗಳಿಂದ ಹಾಸಿಗೆ ಹಿಡಿದಿದ್ದರು. ಅವರನ್ನು ಇಂದು ಖಾಸಗಿ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲು ಮಾಡಲಾಗಿತ್ತು, ಆದರೆ ಅವರಿಗೆ ಚಿಕಿತ್ಸೆ ಫಲಕಾರಿಯಾಗದೇ ವಿಧಿವಶರಾಗಿದ್ದಾರೆ.

ಅವರ ಅಂತ್ಯಕ್ರಿಯೆಯನ್ನು ನೆಲಮಂಗಲದಲ್ಲಿರುವ ಅವರ ತೋಟದ ಮನೆಯಲ್ಲೇ ನೇರವೇರಲಿದೆ ಅಂತ ಪ್ರಾಥಮಿಕ ಮೂಲಗಳಿಂದ ತಿಳಿದು ಬಂದಿದೆ. ಇಂದು ರಾತ್ರಿ ಅವರ ಪಾರ್ಥೀವ ಶರೀರವವನ್ನು ಸಾರ್ವಜನಿಕ ದರ್ಶನಕ್ಕೆ ಇಡಲಾಗಿದ್ದು, ಬಳಿಕ ಅವರ ಅಂತ್ಯಕ್ರಿಯೆಯನ್ನು ನೇರವೇರಸಲಾಗುವುದು ಅಂತ ತಿಳಿದು ಬಂದಿದೆ.ಲೀಲಾವತಿ ದಕ್ಷಿಣ ಭಾರತದ ನಟಿಯಾಗಿ ಗುರುತಿಸಿಕೊಂಡಿದ್ದರು. ಕನ್ನಡದಲ್ಲಿ ಪ್ರಧಾನವಾಗಿ ನಟಿಸುವುದರೊಂದಿಗೆ ತಮಿಳು, ತೆಲುಗು ಮತ್ತು ಮಲಯಾಳಂ ಭಾಷೆಗಳ ಸುಮಾರು 600 ಚಿತ್ರಗಳಲ್ಲಿ ನಟಿಸಿದ್ದಾರೆ.

ಕರ್ನಾಟಕ ಸರ್ಕಾರ ಚಲನಚಿತ್ರರಂಗದ ಜೀವಮಾನ ಸಾಧನೆಗೆ ನೀಡುವ ಅತ್ಯುನ್ನತ ಪ್ರಶಸ್ತಿ ಡಾ. ರಾಜಕುಮಾರ್ ಪ್ರಶಸ್ತಿಯನ್ನು 1999–2000ನೇ ಸಾಲಿನಲ್ಲಿ ಪಡೆದ ಲೀಲಾವತಿ ಅವರು, 'ತುಮಕೂರು ವಿಶ್ವವಿದ್ಯಾಲಯ'ದ ಗೌರವ ಡಾಕ್ಟರೇಟ್ ಪದವಿಯನ್ನು 2008ರಲ್ಲಿ ಪಡೆದಿದ್ದರು.ಲೀಲಾ ಕಿರಣ್ ಹುಟ್ಟಿದ್ದು ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿಯಲ್ಲಿ. ನಾಟಕ, ರಂಗಭೂಮಿ ಬಗೆಗೆ ಚಿಕ್ಕವಯಸ್ಸಿನಲ್ಲೇ ಆಸಕ್ತಿ ಹೊಂದಿದ್ದ ಲೀಲಾ ಅವರು ವೃತ್ತಿಜೀವನ ಆರಂಭಿಸಿದ್ದು ಮೈಸೂರಿನಲ್ಲಿ. ವೃತ್ತಿರಂಗಭೂಮಿಯಲ್ಲಿ ಸಂಪೂರ್ಣ ತೊಡಗಿಸಿಕೊಳ್ಳುವ ಮುನ್ನ ಕೆಲವೆಡೆ ಮನೆ ಕೆಲಸವನ್ನೂ ಅವರು ನಿರ್ವಹಿಸಿದ್ದರು.ಲೀಲಾವತಿ ಅವರ ಮಗ ವಿನೋದ್ ರಾಜ್ ಕನ್ನಡ ಚಿತ್ರರಂಗದ ಖ್ಯಾತ ನಟ. ಪ್ರಸ್ತುತ ತಾಯಿ–ಮಗ ಇಬ್ಬರೂ ತೋಟಗಾರಿಕೆ ಮತ್ತು ಕೃಷಿ ಚಟುವಟಿಕೆಗಳಲ್ಲಿ ಸಕ್ರಿಯರಾಗಿದ್ದರು. ಲೀಲಾವತಿ ಅವರು 1949ರಲ್ಲಿ ಶಂಕರ್ ಸಿಂಗ್ ಅವರ ನಾಗಕನ್ನಿಕ ಚಿತ್ರದಲ್ಲಿ ಸಖಿಯ ಪಾತ್ರದ ಮುಖಾಂತರ ಕನ್ನಡ ಚಿತ್ರರಂಗ ಪ್ರವೇಶಿಸಿದರು. ಸುಬ್ಬಯ್ಯ ನಾಯ್ಡು ಅವರ ಸಂಸ್ಥೆಯಲ್ಲಿ ರಂಗಭೂಮಿ ಕಲಾವಿದೆಯಾಗಿದ್ದ ಲೀಲಾವತಿ ಅವರು ಕಯಾದುವಿನ ಸಖಿಯಾಗಿ ಅಭಿನಯಿಸಿದ್ದರು. ಮಹಾಲಿಂಗ ಭಾಗವತರ ನಾಟಕ ಸಂಸ್ಥೆಯನ್ನು ಸೇರಿ ಹಲವಾರು ನಾಟಕಗಳಲ್ಲಿ ಅಭಿನಯಿಸಿದರು. ಸುಬ್ಬಯ್ಯ ನಾಯ್ಡು ಅವರ 'ಭಕ್ತ ಪ್ರಹ್ಲಾದ'ದಲ್ಲಿ ಕೂಡಾ ಅಭಿನಯಿಸಿದರು. ಹಲವಾರು ಚಿತ್ರಗಳಲ್ಲಿ ಚಿಕ್ಕ ಪಾತ್ರಗಳಲ್ಲಿ ಅಭಿನಯಿಸಿದರು.

ನಾಯಕಿಯಾಗಿ ಅವರು ಅಭಿನಯಿಸಿದ ಮೊದಲ ಚಿತ್ರ ಮಾಂಗಲ್ಯ ಯೋಗ. ಡಾ. ರಾಜ್ ಕುಮಾರ್ ಅವರೊಂದಿಗೆ ನಟಿಸಿದ ಮೊದಲ ಚಿತ್ರ ರಣಧೀರ ಕಂಠೀರವ.

### ಪ್ರಶಸ್ತಿ–ಪುರಸ್ಕಾರಗಳು

2008 – ತುಮಕೂರು ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್

2006 – ಅತ್ಯುತ್ತಮ ಪೋಷಕನಟಿ ಫಿಲಂಫೇರ್ – ಕನ್ನಡದ ಕಂದ

1999–2000 – ಡಾ. ರಾಜಕುಮಾರ್ ಜೀವಮಾನ ಸಾಧನೆ ಪ್ರಶಸ್ತಿ

### ರಾಜ್ಯ ಪ್ರಶಸ್ತಿಗಳು

ಅತ್ಯುತ್ತಮ ಪೋಷಕನಟಿ ಪ್ರಶಸ್ತಿ

1960–70 – ಗೆಜ್ಜೆಪೂಜೆ

1971–72 – ಸಿಪಾಯಿ ರಾಮು

1989–90 – ಡಾಕ್ಟರ್ ಕೃಷ್ಣ

### ವಕೀಲ ಈರಣ್ಣಗೌಡ ಪಾಟೀಲರ ಹತ್ಯೆ ಖಂಡಿಸಿ ಪ್ರತಿಭಟನೆ

## ಚಿತ್ರದುರ್ಗ ವಕೀಲರ ಪ್ರತಿಭಟನೆ

» **ಚಿತ್ರದುರ್ಗ**

ಕಲಬುರಗಿ ಜಿಲ್ಲೆಯ ವಕೀಲ ಈರನಗೌಡ ಪಾಟೀಲರನ್ನು ನ್ಯಾಯಾಲಯದ ಕಲಾಪಕ್ಕೆ ಹಾಜರಾಗಲು ಬರುವ ಸಮಯದಲ್ಲಿ ಹಾಡ ಹಗಲೇ ವಕೀಲರ ಸಮವಸ್ತ್ರದಲ್ಲಿರುವಾಗ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಹಲ್ಲೆ ಮಾಡಿ ಅವರನ್ನು ಬರ್ಬರವಾಗಿ ಹತ್ಯೆ ಮಾಡಿರುವ ಘಟನೆಯನ್ನು ಚಿತ್ರದುರ್ಗ ಜಿಲ್ಲಾ ವಕೀಲರ ಸಂಘವು ಬಲವಾಗಿ ಖಂಡಿಸಿದೆ. ಅಲ್ಲದೆ ಚಿತ್ರದುರ್ಗ ನ್ಯಾಯಾಲಯದಿಂದ ಆರಂಭಿಸಿ ಪ್ರಮುಖ ಬೀದಿ ಗಳಲ್ಲಿ ಪ್ರತಿಭಟನೆ ಮಾಡಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.




ಚಿತ್ರದುರ್ಗ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿರುವ ವಕೀಲರ ಭವನದಲ್ಲಿ ಸರ್ವ ಸದಸ್ಯರ ತುರ್ತು ಸಭೆ ನಡೆಸಿದ ವಕೀಲರ ಸಂಘ ರಾಜ್ಯಾದ್ಯಂತ ವಕೀಲರ ಮೇಲೆ ಹಲ್ಲೆ, ದೌರ್ಜನ್ಯ, ಕೊಲೆ, ಕಿರುಕುಳ ತೊಂದರೆನೀಡುವಕೃತ್ಯಗಳುನಿರಂತರವಾಗಿ ನಡೆಯುತ್ತಿವೆ. ವಕೀಲರ ಹಾಗು ವಕೀಲರ ಕುಟುಂಬದ ಸದಸ್ಯರಿಗೆ ರಕ್ಷಣೆ ಇಲ್ಲವಾಗಿದೆ. ಆರನೇ ಗ್ಯಾರಂಟಿ ಯಾಗಿ ಮೈಸೂರಿನಲ್ಲಿ ನಡೆದ ರಾಜ್ಯ ಮಟ್ಟದ ಸಮಾವೇಶದಲ್ಲಿ ವಕೀಲರೇ ಆದ ಸಿದ್ದರಾಮಯ್ಯ ಅವರು ನುಡಿದಂತೆ ವಕೀಲರ ರಕ್ಷಣಾ ಕಾಯ್ದೆ ಜಾರಿಗೊಳಿಸಲಿ ಎಂದು ಆಗ್ರಹಿಸಿದರು. ರಾಜ್ಯದ ಅನೇಕ ರಾಜಕಾರಣಿಗಳ ಪ್ರಕರಣಗಳನ್ನು ಯಾವುದೇ ವಕೀಲರು ನಡೆಸದಂತೆ ತೀರ್ಮಾನ ಮಾಡಿಕೊಳ್ಳಬೇಕು ಎಂದು ರಾಜ್ಯ ಪರಿಷತ್ ಗೆ ತಿಳಿಸಲು ಚರ್ಚೆ ಮಾಡಿದರು. ವಕೀಲರ ರಕ್ಷಣಾ ಕಾಯ್ದೆಯನ್ನು ಬೆಳಗಾವಿ ಅಧಿವೇಶನದಲ್ಲಿ ಘೋಷಣೆ ಮಾಡಬೇಕು. ವಕೀಲರ ತಾಳ್ಮೆಗೆ ಒಂದು ಮಿತಿ ಇದೇ ದಯವಿಟ್ಟು ನಮ್ಮನ್ನಾಳುವ ಸರ್ಕಾರಗಳು ವಕೀಲರ ತಾಳ್ಮೆಯನ್ನು ಪರೀಕ್ಷಿಸುವ ದುಸ್ಸಾಹಸಕ್ಕೆ ಕೈ ಹಾಕದೆ ವಕೀಲರ ರಕ್ಷಣಾ ಕಾಯ್ದೆ ಜಾರಿಗೆ ತರಬೇಕು ಎಂದು ಸಭೆಯಲ್ಲಿ ಸರ್ವ ಸದಸ್ಯರ ಸಭೆಯಲ್ಲಿ ಅಧ್ಯಕ್ಷರಾದ ವೈ.ತಿಪ್ಪೇಸ್ವಾಮಿ, ಉಪಾಧ್ಯಕ್ಷರಾದ ಅನಿಲ್ ಕುಮಾರ್, ಪ್ರಧಾನ ಕಾರ್ಯದರ್ಶಿ ಆರ್ ಗಂಗಾಧರ್ ಒತ್ತಾಯಿಸಿದ್ದಾರೆ.ರಾಜ್ಯದಲ್ಲಿ ನಿರಂತರವಾಗಿ ವಕೀಲರ ಮೇಲೆ ನಡೆಯುತಿರುವ ಮತ್ತು ನಡೆಸುತ್ತಿರುವ ಹಲ್ಲೆ, ದೌರ್ಜನ್ಯ, ಕೊಲೆ ಹಿಂಸೆಗಳು ರಕ್ಷಣಾ ಕಾಯ್ದೆಯನ್ನು ಜಾರಿಗೆ ತರಲು ಸಾಕಾಗುತ್ತಿಲ್ಲವೆ ಹಿಂಸೆಗಳು ನಡೆಯಬೇಕು ಇದಕ್ಕೆ ವಕೀಲರ ರಕ್ಷಣಾ ಕಾಯ್ದೆ ಜಾರಿಗೆ ತರುವ ಮೂಲಕ ಇಂತಹ ಘಟನೆಗಳಿಗೆ ಕೊನೆ ಹಾಡಲು ರಾಜ್ಯ ಸರ್ಕಾರ ಮುಂದಾಗಬೇಕು ಎಂದು ಆಗ್ರಹಿಸಿದ್ದಾರೆ.


ಪುಟ ↘ 2


## ಹೊಸದುರ್ಗ: ತಾಳಿ ಕಟ್ಟುವ ವೇಳೆ, ಮದುವೆ ನಿರಾಕರಿಸಿದ ವಧು

» **ಹೊಸದುರ್ಗ**

ಶಾಸ್ತ್ರೋಕ್ತವಾಗಿ ಮದುವೆ ನಡೆಯಲು ಹಿರಿಯರೆಲ್ಲಾ ನಿರ್ಧರಿಸಿದ್ದರು. ಅದರಂತೆ ವಧು, ವಾರ, ಬಂದು, ಭಾಂದವರು ಎಲ್ಲಾ ಸೇರಿ ಅದ್ದೂರಿಯಾಗಿ ಮದುವೆ ಆಯೋಜನೆ ಮಾಡಲಾಗಿತ್ತು. ಹಲವು ಶಾಸ್ತ್ರಗಳು ನಿಯಮವಾಗಿಯೇ ನಡೆದವು. ಇನ್ನೇನು ತಾಳಿ ಕಟ್ಟಬೇಕೆಂಬ ಸಂದರ್ಭದಲ್ಲಿ ವಧು ಮದುವೆ ನಿರಾಕರಿಸಿರುವ ಘಟನೆ ತಾಲ್ಲೂಕಿನ ಚಿಕ್ಕಬ್ಯಾಲದಕೆರೆಯಲ್ಲಿ ಗುರುವಾರ ನಡೆದಿದೆ.



**ಘಟನೆ :** ಚಳ್ಳಕೆರೆ ಸುಕನ್ಯಾ ಹಾಗೂ ಜಿ.ಟಿ. ಮಧು ಅವರ ಮಗಳು ಯಮುನಾ ಜಿ.ಎಂ ಹಾಗೂ ಚಿಕ್ಕಬ್ಯಾಲದಕೆರೆ ನಾಗರತ್ನಮ್ಮ ಹಾಗೂ ಸಿ.ಬಿ. ಲಕ್ಷ್ಮಣ್ಣ ಇವರ ಮಗ ಮಂಜುನಾಥ್ ಅವರೊಂದಿಗೆ ಗುರುವಾರ ಚಿಕ್ಕಬ್ಯಾಲದಕೆರೆಯಲ್ಲಿ ಮದುವೆ ನಿಶ್ಚಯಿಸಲಾಗಿತ್ತು. ಕಳೆದ ಒಂದು ವರ್ಷದಿಂದ ವಧು ಹಾಗೂ ವರನ ನಡುವೆ ಉತ್ತಮ ಒಡನಾಟ ವಿತ್ತು. ಪೋಷಕರು ಆಗಲೇ ಮದುವೆ ನಿಶ್ಚಯ ಮಾಡುವ ತವಕದಲ್ಲಿದ್ದರು, ಯಮುನಾ ಓದುವ ಕಾರಣವೊಡ್ಡಿ ಮದುವೆಯನ್ನು ಒಂದು ವರ್ಷ ಮುಂದೂಡಿದ್ದರು. ನಂತರ ಎಲ್ಲರ ಒಪ್ಪಿಗೆಯಂತೆ ಬುಧವಾರ ಆರತಕ್ಷತೆ ಕಾರ್ಯಕ್ರಮ ಅದ್ದೂರಿಯಾಗಿನಡೆಯಿತು.ಗುರುವಾರ ಮುಹೂರ್ತದ ಸಮಯ ಬೆಳಿಗ್ಗೆ 9.30 ಕ್ಕೆ ತಾಳಿ ಕಟ್ಟುವ ಸಮಯದಲ್ಲಿ ವಧು ಬಲಗೈಯಲ್ಲಿ ತಾಳಿ ತಳ್ಳಿದ್ದಾರೆ. ಹಿರಿಯರು ಮತ್ತು ಕುಟುಂಬಸ್ಥರು ಎಷ್ಟೇ ಒತ್ತಾಯ ಮಾಡಿದರೂ, ವಧು ತಾಳಿ ಕಟ್ಟಿಸಿಕೊಳ್ಳಲು ಒಪ್ಪಲಿಲ್ಲವೆಂದು ಮದುವೆಯಲ್ಲಿ ಭಾಗಿಯಾಗಿದ್ದ ಒಬ್ಬರು ಮಾಹಿತಿ ನೀಡಿದರು. ವಧುವಿನ ನಡೆ ಮತ್ತು ತಾಳಿ ಕಟ್ಟಿಸಿಕೊಳ್ಳಲು ತಿರಸ್ಕರಿಸಿದ ಬಗ್ಗೆ ಸಾರ್ವಜನಿಕ ವಲಯದಲ್ಲಿ ಬಾರಿ ಚರ್ಚೆಯಾಗುತ್ತಿದ್ದು, ಈ ಘಟನೆ ಶ್ರೀರಾಂಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.



**ಚಿನ್ನದ ಬೆಲೆ**

| | |
|---|---|
| 91.6 ಕೆಡಿಎಂ (ಗ್ರಾಂ) | 5500 |
| 85 ಕೆಡಿಎಂ (ಗ್ರಾಂ) | 5100 |



**ಬೆಳ್ಳಿ ಬೆಲೆ**
ಕೆಜಿ 63500



## ಫಾಸ್ಟ್ ನ್ಯೂಸ್

### ಪೋಲೀಸ್ ಕಾನ್ಸ್‌ಟೇಬಲ್ ಹುದ್ದೆಗಳಿಗೆ ಡಿ.10 ರಂದು ಲಿಖಿತ ಪರೀಕ್ಷೆ

» ದಾವಣಗೆರೆ

ಕಲ್ಯಾಣ ಕರ್ನಾಟಕ ಪ್ರದೇಶದ ಪೊಲೀಸ್ ಕಾನ್‌ಸ್ಟೇಬಲ್(ಸಿವಿಲ್) (ಪುರುಷ & ಮಹಿಳಾ), (ತೃತೀಯ ಲಿಂಗ ಪುರುಷ & ಮಹಿಳಾ) ಹಾಗೂ ಸೇವಾನಿರತ ಮತ್ತು ಬ್ಯಾಕ್‌ಲಾಗ್-454 ಹುದ್ದೆಗಳಿಗೆ ಡಿ.10 ರ ಭಾನುವಾರ ಬೆಳಿಗ್ಗೆ 11 ರಿಂದ 12.30 ಗಂಟೆಯವರೆಗೆ ಲಿಖಿತ ಪರೀಕ್ಷೆಯನ್ನು ದಾವಣಗೆರೆ ನಗರದ ಈ ಕೆಳಗಿನ 7 ಪರೀಕ್ಷಾ ಕೇಂದ್ರಗಳಲ್ಲಿ ನಡೆಸಲಾಗುತ್ತದೆ.ಅಭ್ಯರ್ಥಿಗಳ ರೋಲ್ ಸಂಖ್ಯೆ 5037341 ರಿಂದ 5037940 ರವರೆಗೆ ಎ.ವಿ ಕಮಲಮ್ಮ ಮಹಿಳಾ ಕಾಲೇಜು ಪಿ.ಜೆ ಬಡಾವಣೆ ದಾವಣಗೆರೆ. 5037941 ರಿಂದ 5038540 ರವರೆಗೆ ಜಿ.ಎಂ ಹಾಲಮ್ಮ ಪಿ.ಯು ಕಾಲೇಜು ಜಿ.ಎಂ.ಐ.ಟಿ ಕ್ಯಾಂಪಸ್, ಹರಿಹರ ರಸ್ತೆ, ದಾವಣಗೆರೆ. 5038541 ರಿಂದ 5039140 ರವರೆಗೆ ಜಿ.ಎಂ ಇನ್ಸ್ ಟಿಟ್ಯೂಟ್ ಆಫ್ ಟೆಕ್ನಾಲಾಜಿ ಜಿ.ಎಂ.ಐ.ಟಿ ಕ್ಯಾಂಪಸ್, ಹರಿಹರ ರಸ್ತೆ, ದಾವಣಗೆರೆ. 5039141 ರಿಂದ 5039580ರವರೆಗೆ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ಹೈಸ್ಕೂಲ್ ಮೈದಾನ ದಾವಣಗೆರೆ. 5039581 ರಿಂದ 5040080 ರವರೆಗೆ ಮೋತಿ ವೀರಪ್ಪ ಸರ್ಕಾರಿ ಪದವಿ ಪೂರ್ವ ಕಾಲೇಜು ಪಿ.ಜೆ ಬಡಾವಣೆ ದಾವಣಗೆರೆ. 5040081 ರಿಂದ 4050520 ರವರೆಗೆ ರಾಜನಹಳ್ಳಿ ಸೀತಮ್ಮ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು ರೋಟರಿ ಬಾಲಭವನದ ಎದುರು, ಪಿ.ಜೆ ಬಡಾವಣೆ ದಾವಣಗೆರೆ. 5040521 ರಿಂದ 5041080 ರವರೆಗೆ ಶ್ರೀತರಳಬಾಳು ಜಗದ್ಗುರು ಸಂಯುಕ್ತ ಪದವಿಪೂರ್ವ ಕಾಲೇಜು ಅನುಭವ ಮಂಟಪ, ಹದಡಿ ರಸ್ತೆ ದಾವಣಗೆರೆ. ಈ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ. ಅರ್ಹ ಅಭ್ಯರ್ಥಿಗಳು ಪ್ರವೇಶ ಪತ್ರಗಳನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದ್ದು, ಅಭ್ಯರ್ಥಿಗಳು ಪ್ರವೇಶ ಪತ್ರದಲ್ಲಿ ಸೂಚಿಸಿರುವ ಅಗತ್ಯ ದಾಖಲಾತಿಗಳೊಂದಿಗೆ ಲಿಖಿತ ಪರೀಕ್ಷಾ ಕೇಂದ್ರಕ್ಕೆ ನಿಗದಿತ ಸಮಯಕ್ಕಿಂತ ಎರಡು ಗಂಟೆ ಮುಂಚಿತವಾಗಿ ಹಾಜರಾಗುವಂತೆ ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್ ತಿಳಿಸಿದ್ದಾರೆ.

### ನಾಳೆ ಲೋಕ ಅದಾಲತ್

» ದಾವಣಗೆರೆ

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದ ಮೇರೆಗೆ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿಡಿಸೆಂಬರ್9ರಂದುರಾಷ್ಟ್ರೀಯ ಲೋಕ್ ಅದಾಲತ್ ಆಯೋಜಿಸಲಾಗಿದೆ.

ರಾಷ್ಟ್ರೀಯ ಲೋಕ್ ಅದಾಲತ್ ಮೂಲಕ ಅತಿ ಹೆಚ್ಚು ಪ್ರಕರಣಗಳನ್ನು ವಿಲೇವಾರಿ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಉದ್ದೇಶಿಸಲಾಗಿದೆ. ಇದರ ಅಂಗವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಜಿಲ್ಲೆಯಲ್ಲಿರುವ ಎಲ್ಲಾ ನ್ಯಾಯಾಲಯಗಳು ತಮ್ಮ ವ್ಯಾಪ್ತಿಯಲ್ಲಿ ಲೋಕ್ ಅದಾಲತ್‌ನ್ನು ಆಯೋಜಿಸಲಿವೆ. ಸಾರ್ವಜನಿಕರು ರಾಷ್ಟ್ರೀಯ ಲೋಕ್ ಅದಾಲತ್‌ನ ಸಂಪೂರ್ಣ ಸದುಪಯೋಗ ಪಡೆದು ಕೊಳ್ಳಬೇಕು. ಈ ಲೋಕ್ ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಚಾಲ್ತಿಯಲ್ಲಿರುವ ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಕಡಿಮೆ ಖರ್ಚಿನಲ್ಲಿ ಶೀಘ್ರವಾಗಿ ಪರಿಹರಿಸಿಕೊಳ್ಳಲು ಸಾರ್ವಜನಿಕರಿಗೆ ಅವಕಾಶ ನೀಡಲಾಗಿದೆ. ರಾಜಿಯಾಗಬಲ್ಲ ಎಲ್ಲಾ ಸಿವಿಲ್ ಹಾಗೂ ಕ್ರಿಮಿನಲ್ ಪ್ರಕರಣಗಳು, ಮೋಟಾರ್ ವಾಹನ ಅಪಘಾತ ಪರಿಹಾರ ಪ್ರಕರಣಗಳು, ಚೆಕ್ ಅಮಾನ್ಯ ಪ್ರಕರಣಗಳು, ಭೂಸ್ವಾಧೀನ ಪರಿಹಾರ ಪ್ರಕರಣಗಳು, ಬ್ಯಾಂಕ್ ಸಾಲ ವಸೂಲಾತಿ ಪ್ರಕರಣಗಳು, ಎಂ.ಎಂ.ಡಿ.ಆರ್. ಕಾಯ್ದೆಯಡಿಯ ಪ್ರಕರಣಗಳನ್ನು ಲೋಕ್ ಅದಾಲತ್ ನಲ್ಲಿ ಪರಿಹರಿಸಿಕೊಳ್ಳಬಹುದು. ಕೌಟುಂಬಿಕ ನ್ಯಾಯಾಲಯದ ಪ್ರಕರಣಗಳು(ವಿಚ್ಛೇದನ ಹೊರತುಪಡಿಸಿ), ಪಿಂಚಣಿ ಪ್ರಕರಣಗಳು, ವೇತನ ಭತ್ಯೆ ಸಂಬಂಧಿಸಿದ ಪ್ರಕರಣಗಳು, ವಿದ್ಯುತ್ ಹಾಗೂ ನೀರಿನ ಶುಲ್ಕ, ಕೈಗಾರಿಕೆ ಕಾರ್ಮಿಕರ ವೇತನ, ಕಾರ್ಮಿಕ ವಿವಾದ ಇತ್ಯಾದಿ ಪ್ರಕರಣಗಳನ್ನು ಪರಸ್ಪರ ಮಾತುಕತೆಯ ಮೂಲಕ ಬಗೆಹರಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ದಾವಣಗೆರೆ ಹಳೆಯ ನ್ಯಾಯಾಲಯ ಸಂಕೀರ್ಣದಲ್ಲಿರುವ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ದೂ.ಸಂ: 08192-296364, ತಾಲ್ಲೂಕು ಕಾನೂನು ಸೇವಾ ಸಮಿತಿಗಳಾದ ಹರಿಹರ ದೂ.ಸಂ: 08192-296885, ಹೊನ್ನಾಳಿ ದೂ.ಸಂ:08188-251732, ಚನ್ನಗಿರಿ ದೂ.ಸ 08189-229195 ಮತ್ತು ಜಗಳೂರು ದೂ.ಸ:08196-227600 ಸಂಪರ್ಕಿಸಲು ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರಣ್ಣವರ ತಿಳಿಸಿದ್ದಾರೆ.



**ಸದಾಶಿವ ಆಯೋಗದ ವರದಿ ಮರಣ ಶಾಸನವೆಂದು ಹೇಳಿಕೆ ನೀಡಿರುವ ಇಮ್ಮಡಿ ಸಿದ್ದರಾಮೇಶ್ವರಸ್ವಾಮಿ ಕ್ಷಮೆ ಯಾಚಿಸಬೇಕು. ಇಲ್ಲವಾದಲ್ಲಿ ರಾಜ್ಯಾದ್ಯಂತ ಚಳುವಳಿ ನಡೆಸುವ ಕುರಿತು ಹನುಮಂತಪ್ಪ ದುರ್ಗ ಪತ್ರಿಕಾಗೋಷ್ಠಿಯಲ್ಲಿ ಎಚ್ಚರಿಕೆ.**

### ಜಾಗೃತಿ ಜಾಥಾಕ್ಕೆ ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಂ.ವಿಜಯ್ ಚಾಲನೆ

# ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಕೈಜೋಡಿಸಿ

» ಚಿತ್ರದುರ್ಗ

ಬಾಲಕಾರ್ಮಿಕ ಮಕ್ಕಳನ್ನು ಗುರುತಿಸಿ ಸಮಾಜದ ಮುಖ್ಯವಾಹಿನಿಗೆ ತರುವನಿಟ್ಟಿನಲ್ಲಿ ವಿವಿಧ ಇಲಾಖೆ ಅಧಿಕಾರಿಗಳು, ಸಾರ್ವಜನಿಕರು ಕೈಜೋಡಿಸಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಶ್ರಮಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಹೇಳಿದರು.

ನಗರದ ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಪದವಿಪೂರ್ವ ಶಿಕ್ಷಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಇವರ ಸಂಯುಕ್ತಾಶ್ರಯದಲ್ಲಿ ಪಾನ್-ಇಂಡಿಯಾ ರೆಸ್ಕ್ಯೂ ಅಂಡ್ ರಿಹ್ಯಾಬಿಲಿಟೇಶನ್ ಕ್ಯಾಂಪೈನ್ ಆಫ್ ಚೈಲ್ಡ್ ಅಂಡ್ ಅಡೋಲೆಸೆಂಟ್ ರಕ್ಷಣಾ ಕಾರ್ಯಾಚರಣೆ ಅಂಗವಾಗಿ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ತಿದ್ದುಪಡಿ 2016"ರ ಕುರಿತು ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪಾನ್-ಇಂಡಿಯಾ ರೆಸ್ಕ್ಯೂ ಅಂಡ್ ರಿಹ್ಯಾಬಿಲಿಟೇಶನ್ ಕ್ಯಾಂಪೈನ್ ಆಫ್




ಚೈಲ್ಡ್ ಅಂಡ್ ಅಡೋಲೆಸೆಂಟ್ ರಕ್ಷಣಾ ಕಾರ್ಯಾಚರಣೆ ಅಂಗವಾಗಿ ಕಾರ್ಮಿಕ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕರನ್ನು ಪತ್ತೆ ಹಚ್ಚಲು ಕಾರ್ಯಾಚರಣೆ ನಡೆಸಿ ಜಿಲ್ಲೆಯಲ್ಲಿ ಒಟ್ಟು 15 ಬಾಲಕಾರ್ಮಿಕರನ್ನು ರಕ್ಷಣೆ ಮಾಡಲಾಗಿದೆ ಎಂದು ತಿಳಿಸಿದ ಅವರು, ಶಾಲೆ ಬಿಟ್ಟ ಮಕ್ಕಳನ್ನು ಶಾಲೆಗೆ ಸೇರಿಸಿ ಮುಖ್ಯವಾಹಿನಿಗೆ ತರಬೇಕು ಎಂದು ಹೇಳಿದರು. 14 ವರ್ಷದೊಳಗಿನ ಮಕ್ಕಳು ಯಾವುದೇ ಉದ್ಯೋಗ, 18 ವರ್ಷ ವಯಸ್ಸಿನವರೆಗಿನ ಕಿಶೋರರು ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸ ಮಾಡುವುದು ಕಂಡ ಬಂದಲ್ಲಿ ತಕ್ಷಣವೇ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳನ್ನು ಸಂಪರ್ಕಿಸಿ ದೂರು ನೀಡಬೇಕು ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಬಾಲಕಾರ್ಮಿಕ ಪದ್ಧತಿಯು ದೇಶಕ್ಕೆ ಅಂಟಿದ ಶಾಪ. ಮಕ್ಕಳು ಕಲಿಯುವ ವಯಸ್ಸಿನಲ್ಲಿ ದುಡಿಮೆಗೆ ಹೋಗುವುದು ಒಂದು ರೀತಿಯಲ್ಲಿ ಪಿಡುಗಾಗಿದೆ. ಕಲಿಯುವ ವಯಸ್ಸಿನಲ್ಲಿ ಕಲಿಯಬೇಕು. ದುಡಿಯುವ ವಯಸ್ಸಿನಲ್ಲಿ ದುಡಿಯಬೇಕು. ಆದ್ದರಿಂದ ಸಮಾಜದ ಮುಖ್ಯವಾಹಿನಿಯಿಂದ ಹೊರಗುಳಿದ ಮಕ್ಕಳನ್ನು ಮುಖ್ಯವಾಹಿನಿಗೆ ತರುವ ಕಾರ್ಯ ನಮ್ಮೆಲ್ಲರ ಮೇಲಿದೆ ಎಂದರು. ಬಾಲ್ಯಾವಸ್ಥೆ ಮತ್ತು ಕಿಶೋರಾವಸ್ಥೆ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು. ಈ ಕುರಿತು ಎಲ್ಲರೂ ಜಾಗೃತರಾಗಬೇಕು. ತಮ್ಮ ಮಕ್ಕಳನ್ನು ಶಾಲೆಗೆ ಸೇರಿಸಿ ಉತ್ತಮ ಶಿಕ್ಷಣ ಕೊಡಿಸಬೇಕು ಎಂದು ತಿಳಿಸಿದರು.

ನಗರದ ಹಳೇ ಮಾಧ್ಯಮಿಕ ಶಾಲಾ ಆವರಣದಿಂದ ಪ್ರಾರಂಭವಾಗಿ, ಗಾಂಧಿವೃತ್ತ, ಮುಖ್ಯ ಅಂಚೆ ಕಚೇರಿ ಮಾರ್ಗವಾಗಿ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಿಂದ ಸಂತೆಹೊಂಡ ಮಾರ್ಗವಾಗಿ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ, ಜಿಲ್ಲಾಧಿಕಾರಿ ಕಚೇರಿವರೆಗೂ ಜಾಥಾ ನಡೆಸಿ, ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಯಿತು.

ಜಾಗೃತಿ ಜಾಥಾದಲ್ಲಿ ಕೂಲಿಬಿಡಿಸಿ, ಶಾಲೆಗೆ ಕಳುಹಿಸಿ, ಮಕ್ಕಳ ಸಹಾಯವಾಣಿ 1098 ಗೆ ಕರೆಮಾಡಿ, ಶಿಕ್ಷಣವಿಲ್ಲದ ಬಾಳು ಅಂಧಕಾರದ ಗೋಳು, ಮಕ್ಕಳ ದುಡಿಮೆ ರಾಷ್ಟ್ರಕಳಂಕ, ನಟ್ ಬೋಲ್ಟ್ ಕೊಡಿಸಬೇಡಿ, ಸ್ಲೇಟು ಬಳಪ ಕೈಗೆ ಕೊಡಿ, ಬಾಲಕಾರ್ಮಿಕರ ನೇಮಕಾತಿ ಶಿಕ್ಷಾರ್ಹ ಅಪರಾಧ, 18 ವರ್ಷದೊಳಗಿನ ಮಕ್ಕಳನ್ನು ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧ ಎಂಬ ಇತ್ಯಾಧಿ ಫಲಕಗಳು ಗಮನಸೆಳೆದವವು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಮಿಕರ ಅಧಿಕಾರಿ ಇಬ್ರಾಹಿಂ ಸಾಬ್, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಡಾ.ಪ್ರಭಾಕರ್, ನಗರಸಭೆ ಆಯುಕ್ತೆ ರೇಣುಕಾ, ಕಾರ್ಮಿಕ ನಿರೀಕ್ಷರಾದ ಡಿ.ರಾಜಣ್ಣ, ಕುಸುಮ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿ.ಸವಿತಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಪವಿತ್ರ, ನಗರ ಪೊಲೀಸ್ ಠಾಣೆ ವೃತ್ತಿ ನಿರೀಕ್ಷಕ ಜೆ.ತಿಪ್ಪೇಸ್ವಾಮಿ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್, ಕಾರ್ಮಿಕ ಇಲಾಖೆ ವಿಷಯ ನಿರ್ವಾಹಕ ತೀರ್ಥಪ್ರಸಾದ್, ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜು ಪ್ರಾಂಶುಪಾಲ ಹೆಚ್.ನಾಗರಾಜ್ ಸೇರಿದಂತೆ ಶಾಲಾ-ಕಾಲೇಜು ವಿದ್ಯಾರ್ಥಿಗಳು ಇದ್ದರು.

### ಶೈಕ್ಷಣಿಕ ಕಾರ್ಯಾಗಾರದಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿಆರ್‌ಜೆ

# ಮಕ್ಕಳಲ್ಲಿ ಪ್ರಶ್ನೆ ಮಾಡುವ ಮನೋಭಾವ ಬೆಳಸಬೇಕು

» ಚಿತ್ರದುರ್ಗ

ಶಿಕ್ಷಕರು ಮಕ್ಕಳಿಗೆ ಶಿಕ್ಷಣ ನೀಡುವುದರ ಜೊತೆಗೆ ಪ್ರಶ್ನೆ ಮಾಡುವ ಮನೋಭಾವವನ್ನು ಬೆಳಸಬೇಕು, ಆಗ ಮಾತ್ರ ವಿದ್ಯಾರ್ಥಿಗಳು ಮುಂದೆ ಬರಲು ಸಾಧ್ಯ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿಆರ್‌ಜೆ ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಪ್ರೌಢಶಾಲಾ ಹಿಂದಿ ಶಿಕ್ಷಕರ ಸಂಘದ ವತಿಯಿಂದ ಆಯೋಜಿಸಿದ್ದ ಜಿಲ್ಲಾ ಪ್ರೌಢಶಾಲಾ ಹಿಂದಿ ಭಾಷಾ ಶಿಕ್ಷಕರ ಶೈಕ್ಷಣಿಕ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಮಾತೃ ಭಾಷೆಯ ಜೊತೆಗೆ ಎಲ್ಲಾ ಭಾಷೆಯ ಕಲಿಕೆಗೂ ಸಹ ಒತ್ತು ನೀಡಿದಾಗ ಮಾತ್ರ ಎಲ್ಲಾ ವಿಷಯಗಳಲ್ಲಿ ಅತಿ ಹೆಚ್ಚು ಅಂಕಗಳಿಸಲು ವಿದ್ಯಾರ್ಥಿಗಳಿಗೆ ಸುಲಭವಾಗುತ್ತದೆ. ಒಂದೊಂದು ವಿಷಯಗಳನ್ನು ಒಂದೊಂದು ವಿಧಾನದಲ್ಲಿ ತಿಳಿಸಬೇಕು, ಮಕ್ಕಳಲ್ಲಿ ಆತ್ಮ ವಿಶ್ವಾಸ ನೀಡಿದರೆ ಅವರು ಸಾಧನೆ ಮಾಡಲು ಸಹಕಾರಿಯಾಗುತ್ತದೆ. ವಿದ್ಯಾರ್ಥಿಗಳಿಗೆ ಯಾವುದೇ ಭಾಷೆಯನ್ನಾಗಲಿ ಸರಳ ಹಾಗೂ ಅರ್ಥವಾಗುವ ರೀತಿಯಲ್ಲಿ ಬೋಧನೆ ಮಾಡಬೇಕು ಮತ್ತು ಶಿಕ್ಷಕರು ಆಸಕ್ತಿದಾಯಕವಾಗಿ ಪಾಠ ಕಲಿಸುವ ಮನಸ್ಥಿತಿ ಹೊಂದಿರಬೇಕು ಎಂದರು.

ವಯಸ್ಸು ಕಳೆದಂತೆ ಕಲಿಯುವ ಆಸಕ್ತಿ ಕಡಿಮೆಯಾಗುತ್ತದೆ, ಹೀಗಾಗಿ ಸಾಧನೆ ಮಾಡಿದ ಬಳಿಕ ಅಲ್ಲೇ ಇರಬಾರದು, ಕಲಿಕೆ ನಿಂತ ನೀರಾಗಬಾರದು, ಪುಸ್ತಕಗಳನ್ನು ನಿರಂತರವಾಗಿ ಓದುವುದರಿಂದ ಇನ್ನೂ ಹೆಚ್ಚು ಹೆಚ್ಚು ಸಾಧನೆ ಮಾಡಬಹುದು ಎಂದು ಶಿಕ್ಷಕರಿಗೆ ಕಿವಿ ಮಾತು ಹೇಳಿದರು.

ಜೀವನದಲ್ಲಿ ಶಿಕ್ಷಣ ಹಾಗೂ ಶಿಕ್ಷಕರನ್ನು ಯಾವುದೇ ಕಾರಣಕ್ಕೂ ಮರೆಯಲು ಸಾಧ್ಯವಾಗುವುದಿಲ್ಲ. ಹೀಗಾಗಿ ಶಿಕ್ಷಕರು ಸಾಧನೆ ಮಾಡುವುದರ ಜೊತೆಗೆ ವಿದ್ಯಾರ್ಥಿಗಳನ್ನು



ಭಾರತ ಭವಿಷ್ಯದ ಉತ್ತಮ ಪ್ರಜೆಗಳನ್ನಾಗಿ ಮಾಡಬಹುದು. ಮುಂಬರುವ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ನೀಡುವುದರ ಜೊತೆಗೆ ನಮ್ಮ ಜಿಲ್ಲೆಯನ್ನು ಶೈಕ್ಷಣಿಕವಾಗಿ ಉನ್ನತ ಸ್ಥಾನಕ್ಕೆ ಏರಿಸಬೇಕು ಎಂದು ತಿಳಿಸಿದರು.

ಎಸ್‌ಎಸ್‌ಎಲ್‌ಸಿ ನೋಡಲ್ ಅಧಿಕಾರಿ ಎನ್.ಆರ್. ತಿಪ್ಪೇಸ್ವಾಮಿ ಮಾತನಾಡಿ, ನಿರಂತರ ಶೈಕ್ಷಣಿಕ ಕಾರ್ಯಾಗಾರಗಳಲ್ಲಿ ಶಿಕ್ಷಕರು ಪಾಲ್ಗೊಳ್ಳುವುದರಿಂದ ಅವರಲ್ಲಿ ಉತ್ಸಾಹ ಹೆಚ್ಚಾಗುತ್ತದೆ. ಈ ವರ್ಷದ ಶೈಕ್ಷಣಿಕ ಪರೀಕ್ಷೆ ನಡೆಸುವ ವ್ಯವಸ್ಥೆ ಬದಲಾಗಿದೆ, ಆ ನಿಟ್ಟಿನಲ್ಲಿ ಎಲ್ಲಾ ಶಿಕ್ಷಕರು ಹೆಚ್ಚಿನ ಶ್ರಮವಹಿಸಿ ನಮ್ಮ ಉನ್ನತ ಫಲಿತಾಂಶ ಸ್ಥಾನವನ್ನು ಉಳಿಸಿಕೊಳ್ಳಬೇಕು ಎಂದು ಹೇಳಿದರು.ಚಿತ್ರದುರ್ಗ ತಾಲ್ಲೂಕಿನ ವಿದ್ಯಾಧಿಕಾರಿ ಸಿದ್ದಪ್ಪ ಮಾತನಾಡಿ, 2022 ರಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ರಾಜ್ಯದಲ್ಲಿ ಪ್ರಥಮ ಸ್ಥಾನಗಳಿಸಿರುವುದು ಸಂತೋಷಕರ ವಿಷಯ ಇದೇ ರೀತಿ ಮುಂಬರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅದನ್ನು ಉಳಿಸಿಕೊಂಡು ಹೋಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿಆರ್‌ಜೆ ಅವರು ಹಿಂದಿ ಭಾಷೆಯ ಪಾಸಿಂಗ್ ಮತ್ತು ಸ್ಕೋರಿಂಗ್ ಪ್ಯಾಕೇಜ್ ಪುಸ್ತಕವನ್ನು ಬಿಡುಗಡೆ ಮಾಡಿದರು.

ಗುಲ್ಬರ್ಗ ಜಿಲ್ಲೆಯ ಹಿಂದಿ ಉಪನ್ಯಾಸಕ ಗುಲಾಬ್ ನಭಿ ಅವರು ಹಿಂದಿ ವಿಷಯದ ಬೋಧನೆ ಕುರಿತು ಶಿಕ್ಷಕರಿಗೆ ತರಬೇತಿ ನೀಡಿದರು.

ಕಾರ್ಯಾಗಾರದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ನಾಗಭೂಷಣ್, ಸಮಗ್ರ ಶಿಕ್ಷಣ ಜಿಲ್ಲಾ ಸಮನ್ವಯಾಧಿಕಾರಿ ವೆಂಕಟೇಶ್, ಚಳ್ಳಕೆರೆ ಕ್ಷೇತ್ರ ಶಿಕ್ಷಣಾಧಿಕಾರಿ ಸುರೇಶ್, ಆಂಗ್ಲ ಮತ್ತು ಸಮಾಜ ವಿಷಯ ಪರಿವೀಕ್ಷಕ ಚಂದ್ರಣ್ಣ, ಗಣಿತ ವಿಷಯ ಪರಿವೀಕ್ಷಕಿ ಸವಿತಾ, ವಿಜ್ಞಾನ ವಿಷಯ ಪರಿವೀಕ್ಷಕ ಗೋವಿಂದಪ್ಪ, ಕನ್ನಡ ವಿಷಯ ಪರಿವೀಕ್ಷಕ ಶಿವಣ್ಣ, ಜಿಲ್ಲಾ ಹಿಂದಿ ಭಾಷಾ ಶಿಕ್ಷಕರ ಸಂಘದ ಅಧ್ಯಕ್ಷ ಗೋವಿಂದರೆಡ್ಡಿ, ಹಿಂದಿ ಭಾಷಾ ಬೋಧಕರ ರಾಜ್ಯ ಕಾರ್ಯದರ್ಶಿ ಮಂಜುನಾಥ್, ಜಿಲ್ಲಾ ಕಾರ್ಯದರ್ಶಿ ಶ್ರೀನಿವಾಸ್, ಸಹ ಶಿಕ್ಷಕ ಗಿರೀಶ್, ಸೇರಿದಂತೆ ವಿಷಯ ಪರಿವೀಕ್ಷಕರು ಉಪಸ್ಥಿತರಿದ್ದರು. ಕಾರ್ಯಾಗಾರದಲ್ಲಿ ಜಿಲ್ಲೆಯ ಶಾಲೆಗಳ ಹಿಂದಿ ಭಾಷಾ ಶಿಕ್ಷಕರು ಪಾಲ್ಗೊಂಡಿದ್ದರು.

# ವಕೀಲರ ಪ್ರತಿಭಟನೆ


» ಮೊದಲ ಪುಟದಿಂದ


ಈಗಾಗಲೇ ರಾಜ್ಯ ಸರ್ಕಾರ ತಾನು ವಕೀಲ ಸಮುದಾಯಕ್ಕೆ ಮಾತು ಕೊಟ್ಟ ಪ್ರಕಾರ ತತ್ ಕ್ಷಣ ಕರ್ನಾಟಕ ರಾಜ್ಯ ವಕೀಲರ ರಕ್ಷಣಾ ಕಾಯ್ದೆಯನ್ನು ಈಗ ಬೆಳಗಾವಿಯಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಮಂಡನೆ ಮಾಡಿ ಚರ್ಚಿಸಿ ಅದನ್ನು ಜಾರಿ ಮಾಡಬೇಕು ಎಂದು ಹೇಳಿದರು.ವಕೀಲರ ರಕ್ಷಣಾ ಕಾಯ್ದೆಗೆ ಒತ್ತಾಯಿಸಿ ಈಗಾಗಲೇ ಇಡೀ ರಾಜ್ಯದಲ್ಲಿ ವಕೀಲರು ಹಲವಾರು ವರ್ಷಗಳಿಂದ ನಿರಂತರವಾಗಿ ರಕ್ಷಣಾ ಕಾಯ್ದೆ ಜಾರಿಗೆ ಒತ್ತಾಯಿಸಿ ಹೋರಾಟ ಮಾಡುತ್ತಾ ಬಂದಿದ್ದು, ರಾಜ್ಯ ಸರ್ಕಾರ ವಕೀಲರ ರಕ್ಷಣಾ ಕಾಯ್ದೆ ಜಾರಿಗೆ ತರಲು ವಿಫಲವಾದಲ್ಲಿ ಮತ್ತೆ ರಾಜ್ಯದ ಎಲ್ಲಾ ವಕೀಲರು ಬೆಳಗಾವಿಯಲ್ಲಿ ನಡೆಯುತ್ತಿರುವ ಅಧಿವೇಶನಕ್ಕೆ ಮುತ್ತಿಗೆ ಹಾಕುವ ಮತ್ತು ಧರಣಿ ಹೋರಾಟ ಮಾಡುವ ಎಚ್ಚರಿಕೆಯನ್ನು ಕೂಡ ನೀಡಿದರು.

ಸಭೆಯಲ್ಲಿ ವಕೀಲರಾದ ಕೆ.ಎಂ.ಮಲ್ಲಿಕಾರ್ಜುನ್, ಕೆ. ಮಂಜುನಾಥ್ ರೆಡ್ಡಿ, ಡಾ.ಎಂ.ಸಿ.ನರಹರಿ, ವಿಜಯ್ ಕುಮಾರ್, ಎಂ.ಕೆ.ಲೋಕೇಶ್, ದಿಲ್ ಷಾದ್ , ಸೋಮಶೇಖರ್ ರೆಡ್ಡಿ. ಮಾಲತೇಶ್ ಅರಸ್, ಜಯಣ್ಣ, ರವೀಂದ್ರ ರಾಥೋಡ್, ಪ್ರತಾಪ್ ಜೋಗಿ ಇನ್ನೂ ಅನೇಕರು ಮಾತನಾಡಿದರು.ಆದ್ದರಿಂದ ಬೆಳಗಾವಿಯಲ್ಲಿ ನಡೆಯುತ್ತಿರುವ ಅಧಿವೇಶನದಲ್ಲಿ ವಕೀಲರ ರಕ್ಷಣಾ ಕಾಯ್ದೆಯನ್ನು ಜಾರಿಗೆ ತರಬೇಕೆಂದು ಒತ್ತಾಯಿಸಿದರು. ವೇದಿಕೆಯಲ್ಲಿ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ವೈ ತಿಪ್ಪೇಸ್ವಾಮಿ, ಉಪಾಧ್ಯಕ್ಷರಾದ ಅನಿಲ್ ಕುಮಾರ್, ಪ್ರಧಾನ ಕಾರ್ಯದರ್ಶಿ ಗಂಗಾಧರ್, ಸಹ ಕಾರ್ಯದರ್ಶಿ ಗಿರೀಶ್, ಖಜಾಂಚಿ ಪ್ರದೀಪ್, ಕಾರ್ಯಕಾರಿ ಸದಸ್ಯೆ ರೂಪಾದೇವಿ, ಶೀಲಾ ವೇದಿಕೆಯಲ್ಲಿ ಇದ್ದರು.

ಪ್ರತಿಭಟನೆಯ ನೇತೃತ್ವವನ್ನು ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ವೈ ತಿಪ್ಪೇಸ್ವಾಮಿ, ಉಪಾಧ್ಯಕ್ಷರಾದ ಅನಿಲ್ ಕುಮಾರ್, ಪ್ರಧಾನ ಕಾರ್ಯದರ್ಶಿ ಗಂಗಾಧರ್, ಮತ್ತು ಪದಾಧಿಕಾರಿಗಳು ವಹಿಸಿದ್ದರು.

ಇನ್ನೂ ಬೃಹತ್ ಪ್ರತಿಭಟನೆಯು ನ್ಯಾಯಾಲಯದಿಂದ ಹೊರಟು ಒನಕೆ ಓಬವ್ವ ವೃತ್ತ, ಅಂಬೇಡ್ಕರ್ ವೃತ್ತ, ಮದಕರಿ ವೃತ್ತ, ಮಹಾವೀರ ವೃತ್ತ, ಕಿತ್ತೂರು ರಾಣಿ ಚೆನ್ನಮ್ಮ ವೃತ್ತ, ಸಂಚರಿಸಿ ಗಾಂಧಿ ವೃತ್ತದಲ್ಲಿ ಮಾನವ ಸರಪಳಿ ರಚಿಸಿ ಘೋಷಣೆ ಕೂಗಲಾಯಿತು.

ನ್ಯಾಯಾಲಯದ ಮುಂಭಾಗ ಶಾಮಿಯಾನ ಹಾಕಿ ಪ್ರತಿಭಟನೆ ಮಾಡಿದರು. ಈ ವೇಳೆ ಹಿರಿಯ ವಕೀಲರಾದ ಮಂಜುನಾಥ್, ತಿಪ್ಪೇಸ್ವಾಮಿ, ಉಮೇಶ್, ಮಲ್ಲಿಕಾರ್ಜುನ, ಅಬ್ದುಲ್ ಜಿಲ್ಫಿಕರ್, ವೀರೇಶ್, ಗೀತಾ, ರಾಧ, ಮಂಜುಳ, ದೇವಕಿ, ತಕ್ಷಶಿಲ, ಅಕ್ಷಿತಾ, ಮೆಹರೋಜ್ ಬೇಗಂ,ಚಿನ್ನಪ್ಪ, ಗೋವಿಂದ ರೆಡ್ಡಿ, ಉಮಾಪತಿ, ಶಿವಣ್ಣ ಸೇರಿದಂತೆ ನೂರಾರು ವಕೀಲರು ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

### ಕಲಬುರ್ಗಿ ವಕೀಲನ ಹಾಡುಹಗಲೇ ಕಗ್ಗೊಲೆ

# ವಕೀಲರ ರಕ್ಷಣೆ ನೀಡುವಂತೆ ಸಿಎಂಗೆ ಮನವಿ

» ಚಳ್ಳಕೆರೆ

ವಕೀಲರ ಪ್ರತಿಭಟನೆಯ ನಡುವೆಯೂ ಸಹ ವಕೀಲರ ಮೇಲೆ ನಡೆಯುವ ದೌರ್ಜನ್ಯ ಹಾಗೂ ಕೊಲೆ ಪ್ರಕರಣಗಳು ನಿಯಂತ್ರಣವಾಗಿಲ್ಲ. ವಕೀಲರ ಸಮೂಹಕ್ಕೆ ನ್ಯಾಯವನ್ನು ದೊರಕಿಸಿಕೊಡುವ ನಿಟ್ಟಿನಲ್ಲಿ ಸರ್ಕಾರ ವಿಫಲವಾಗಿದೆ ಎಂದು ವಿರೋಧಿಸಿ ತಾಲ್ಲೂಕು ವಕೀಲರ ಸಂಘದಿಂದ ಶನಿವಾರ ಪ್ರತಿಭಟನೆ ನಡೆಸಲಾಯಿತು.

ತಹಶೀಲ್ದಾರ್‌ಗೆ ಮನವಿ ಅರ್ಪಿಸಿ ಮಾತನಾಡಿದ ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಕೆ.ಎಂ.ನಾಗರಾಜು, ಕಲಬುರ್ಗಿ ನಗರದಲ್ಲಿ ಜಮೀನಿನ ವ್ಯಾಜ್ಯಕ್ಕೆ ಸಂಬಂಧಪಟ್ಟಂತೆ ವಕೀಲ ಈರಣ್ಣಗೌಡ(40) ಎಂಬುವವರನ್ನು ಅಟ್ಟಾಡಿಸಿ ಕಗ್ಗೊಲೆ ಮಾಡಲಾಗಿದೆ. ಹಾಡುಹಗಲೇ ಜನಬೀಡ ರಸ್ತೆಯಲ್ಲಿ ಸಾರ್ವಜನಿಕರೆದುರೆ ಈ ಕೊಲೆ ನಡೆದಿದೆ. ಇಂತಹ ಭೀಕರ ಕೊಲೆಗಳಿಂದ ವಕೀಲರ ಆತ್ಮವಿಶ್ವಾಸ ಕಡಿಮೆಯಾಗುವುದಲ್ಲದೆ,




ಕಕ್ಷಿದಾರರ ಪರವಾಗಿ ನ್ಯಾಯಾಲಯದಲ್ಲಿ ನ್ಯಾಯ ಮಂಡಿಸಲು ವಕೀಲರು ಚಿಂತನೆ ನಡೆಸಬೇಕಾದ ಕಾಲ ಎದುರಾಗಿದೆ. ಆದ್ದರಿಂದ ಸರ್ಕಾರ ಈ ಬಗ್ಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕಲ್ಲದೆ, ವಕೀಲರು ಯಾವುದೇ ಆತಂಕವಿಲ್ಲದೆ ನ್ಯಾಯಾಲಯದ ಕಾರ್ಯಕಲಾಪಗಳಲ್ಲಿ ಭಾಗವಹಿಸಲು ಅನುಕೂಲವಾಗುವಂತೆ ಉತ್ತಮ ವಾತಾವರಣ ನಿರ್ಮಾಣ ಮಾಡಬೇಕೆಂದು ಮನವಿ ಮಾಡಿದರು.

ತಹಶೀಲ್ದಾರ್ ಪರವಾಗಿ ಮನವಿ ಸ್ವೀಕರಿಸಿದ ಶಿರಸ್ಥೇದಾರ್ ಸದಾಶಿವಪ್ಪ, ತಮ್ಮ ಮನವಿಯನ್ನು ಮಾನ್ಯ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಕಳಿಸಿಕೊಡುವ ಭರವಸೆ ನೀಡಿದರು. ಪ್ರತಿಭಟನೆಯಲ್ಲಿ ವಕೀಲರ ಸಂಘದ ಉಪಾಧ್ಯಕ್ಷ ಬಿ.ಪಾಲಯ್ಯ, ಪ್ರಧಾನ ಕಾರ್ಯದರ್ಶಿ ಸಿದ್ದರಾಜು, ಶ್ರೀನಿವಾಸ್‌ಮೂರ್ತಿ, ಎಂ.ಎಸ್. ಜಗದೀಶ್‌ನಾಯಕ, ಜೆ.ರಾಘವೇಂದ್ರನಾಯಕ,ಜಿ.ಕೆ.ಪವಿತ್ರ,ದೊರೆನಾಗರಾಜು, ಶ್ಯಾಮಲ, ಕೆ.ಟಿ.ರುದ್ರೇಶ್, ಕುರುಡಿಹಳ್ಳಿ ಶ್ರೀನಿವಾಸ್, ದೊಡ್ಡರಂಗಪ್ಪ, ಶರಣಪ್ಪಯ್ಯ, ಮಂಜುನಾಥ ಮುಂತಾದವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಮಹಿಳಾ ಕಾಣೆ, ಪತ್ತೆಗೆ ಮನವಿ

» ದಾವಣಗೆರೆ

ರಾಜ್ಯ ಮಹಿಳಾ ನಿಲಯ ಜಿಲ್ಲಾ ಸಂಸ್ಥೆಯ 27 ವರ್ಷ ವಯಸ್ಸಿನ ನಿವಾಸಿಗೆ ವಾಕ್ ಹಾಗೂ ಶ್ರವಣ ದೋಷವಿದ್ದು, ಇವರ ವಿಳಾಸ ಪತ್ತೆಗೆ ಸಹಕರಿಸುವಂತೆ ರಾಜ್ಯ ಮಹಿಳಾ ನಿಲಯ ಜಿಲ್ಲಾ ಸಂಸ್ಥೆಯ ಅಧೀಕ್ಷರು ಮನವಿ ಮಾಡಿದ್ದಾರೆ. ಚಹರೆ ವಿವರ: ಸಾಧಾರಣ ಎತ್ತರ, ಮುಖದ ಮೇಲೆ ಕಪ್ಪು ಮಚ್ಚೆ ಇದೆ. ಎಡಗೈ ಹೆಬ್ಬೆರಳು ತುಂಡಾಗಿದ್ದು, ದೈಹಿಕ ಮತ್ತು ಮಾನಸಿಕ ಸ್ಥಿತಿ ಸಾಮಾನ್ಯವಾಗಿರುತ್ತದೆ. ಮಾತನಾಡಲು ಬರುವುದಿಲ್ಲ. ಸಂರಕ್ಷಣೆಯ ಹಿತ ದೃಷ್ಟಿಯಿಂದ 2023 ಜನವರಿ 22 ರಂದು. ಕಾರವಾರ ಮಹಿಳಾ ಪೊಲೀಸ್ ಠಾಣಾಧಿಕಾರಿಗಳು ದಾಖಲಿಸಿರುತ್ತಾರೆ. ಮತ್ತು ರಾಜ್ಯ ಮಹಿಳಾ ನಿಲಯ ಜಿಲ್ಲಾ ಸಂಸ್ಥೆಯ 55 ವರ್ಷ ವಯಸ್ಸಿನ ನಿವಾಸಿ ಹಿಂದೂ ಮರಾಠ ಜನಾಂಗದ ಸುಶೀಲ ನಾರಾಯಣ ಕಾಂಬ್ಳೆ ಇವರು ಮಾನಸಿಕ ಅಸ್ವಸ್ಥತೆಯಿಂದ ಮನೆ ಬಿಟ್ಟು ಬಂದಿದ್ದು, ಪತ್ತೆಗೆ ಸಹಕರಿಸುವಂತೆ ರಾಜ್ಯ ಮಹಿಳಾ ನಿಲಯ ಜಿಲ್ಲಾ ಸಂಸ್ಥೆಯ ಅಧೀಕ್ಷರು ಮನವಿ ಮಾಡಿದ್ದಾರೆ. ಚಹರೆ ವಿವರ: ಗೋಧಿ ಬಣ್ಣ, ಸಾಧಾರಣ ಎತ್ತರ, ಎಡಕೆನ್ನೆ ಮೇಲೆ ಕಪ್ಪು ಮಚ್ಚೆ ಇದೆ. ಮರಾಠಿ ಮಾತನಾಡುತ್ತಾರೆ. ಸಂರಕ್ಷಣೆಯ ಹಿತ ದೃಷ್ಟಿಯಿಂದ 2023 ಮಾರ್ಚ್ 12 ರಂದು. ಕಾರವಾರ ಮಹಿಳಾ ಪೊಲೀಸ್ ಠಾಣಾಧಿಕಾರಿಗಳು ದಾಖಲಿಸಿರುತ್ತಾರೆ. ಇವರ ಸುಳಿವು ದೊರೆತಲ್ಲಿ ಜಿಲ್ಲಾ ಅಧೀಕ್ಷಕರ ಕಚೇರಿ, ರಾಜ್ಯ ಮಹಿಳಾ ನಿಲಯ, ಇಂಡಸ್ಟ್ರೀಯಲ್ ಏರಿಯಾ, ಶ್ರೀರಾಮನಗರ, ದೂ.ಸಂ. 9448940337 ಸಂಪರ್ಕಿಸಿ.

### ಸ್ಪಿಂಕ್ಲರ್ ವಿತರಣೆಗಾಗಿ ಅರ್ಜಿ ಅಹ್ವಾನ

» ನಾಯಕನಹಟ್ಟಿ



ಅತೀ ಕಡಿಮೆ ನೀರಿನಲ್ಲಿ ತುಂತುರು ನೀರು ಅಳವಡಿಸಿಕೊಂಡು ಹೆಚ್ಚು ಹಿಳುವರಿ ಪಡೆಯಲು ಹನಿ ನೀರಾವರಿ ಯೋಜನೆಗೆ ರೈತರು ಉಪಯುಕ್ತವಾದದರು ಬರಪೀಡಿದ ಪ್ರದೇಶವಾದ ತಳಕು ಹೋಬಳಿಯ ರೈತರು ಈ ಯೋಜನೆಯನ್ನು ಸದುಪಯೋಗ ಪಡೆದುಕೊಳ್ಳಬೇಕು. ತಳಕು ಕೃಷಿ ಇಲಾಖೆಯಿಂದ ಅರ್ಜಿ ಕರೆಯಲಾಗಿದ್ದು ಅರ್ಹ ರೈತರು ಈ ಯೋಜನೆಯನ್ನು ಸದುಪಯೋಗ ಪಡಿಸಿಕೊಳ್ಳಬೇಕೆಂದು ತಳಕು ಕೃಷಿ ಅಧಿಕಾರಿ ಮಂಜುನಾಥ ತಿಳಿಸಿದ್ದಾರೆ. ತಳಕು ಹೋಬಳಿಯ ರೈತ ಸಂಪರ್ಕ ಕೇಂದ್ರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ರೈತರು 2023–24ನೇ ಸಾಲಿನ ಸೂಕ್ಷ್ಮ ನೀರಾವರಿ ಯೋಜನೆಯಡಿ ಕೃಷಿ ಇಲಾಖೆಯ ವತಿಯಿಂದ ತುಂತುರು ನೀರಾವರಿ ಘಟಕ ಸ್ಪಿಂಕ್ಲರ್ ವಿತರಣೆಗಾಗಿ ಅರ್ಜಿ ಅಹ್ವಾನಿಸಲಾಗಿದೆ. ಆಸಕ್ತ ರೈತರು ಅರ್ಜಿ ಫಾರಂನೊಂದಿಗೆ ಆಧಾರ್ ಕಾರ್ಡ್, ಎಫ್ಐಡಿ ಜೆರಾಕ್ಸ್, ಪಹಣಿ ಜೆರಾಕ್ಸ್, ನೀರಾವರಿ ಮೂಲದ ದೃಢೀಕರಣ ಪತ್ರ ಬ್ಯಾಂಕ್ ಪಾಸ್‌ಪುಸ್ತಕದ ನಕಲು ಪ್ರತಿ, ಹಾಗೂ ಮೂರು ಫೋಟೋಗಳೊಂದಿಗೆ ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರಕ್ಕೆ ಸಂಪರ್ಕಿಸಿ ಕೂಡಲೇ ಅರ್ಜಿ ಹಾಕಬೇಕು ಎಂದು ಅವರು ವಿನಂತಿಸಿದರು. ಸೂಕ್ಷ್ಮ ನೀರಾವರಿ ಯೋಜನೆಯಡಿ ಸ್ಪಿಂಕ್ಲರ್‌ಸೆಟ್ ವಿತರಣೆಯ ವಿವರ ರೈತರ ವಂತಿಕೆ ಸಹಾಯ ಧನ ಒಟ್ಟು ಮೊತ್ತ ರೂಗಳಲ್ಲಿ, ಎರಡುವರೆ ಇಂಚಿನ ಮೂವತ್ತು ಪೈಪ್, 5 ತುಂತುರು ಹನಿ ಜೆಟ್ ಸೇರಿ 26,442/– ರೂ. ರೈತರ ವಂತಿಗೆ 4,667/– ಸಹಾಯ ಧನ 21,775/– ರೂ. ಹೆಚ್ಚಿನ ಮಾಹಿತಿಗಾಗಿ ಅಗತ್ಯ ದಾಖಲೆಗಳೊಂದಿಗೆ ತಳಕು ರೈತ ಸಂಪರ್ಕ ಕೇಂದ್ರಗಳಿಗೆ ಬೇಟಿ ನೀಡಿ ಅರ್ಜಿ ಸಲ್ಲಿಸುವಂತೆ ತಳಕು ಕೃಷಿ ಅಧಿಕಾರಿ ಮಂಜುನಾಥ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಚನ್ನಗಿರಿ ಪುರಸಭೆ ಉಪಚುನಾವಣೆ ವೇಳಾಪಟ್ಟಿ

» ದಾವಣಗೆರೆ

ಚನ್ನಗಿರಿ ಪುರಸಭೆ ವ್ಯಾಪ್ತಿಯ ಸಿಹಿನೀರು ಬಾವಿ ರಸ್ತೆ ಬಡಾವಣೆ ವಾರ್ಡ್ ಸಂಖ್ಯೆ–14 ರಲ್ಲಿ ಅಸ್ಲಾಂ ಬೇಗ್ ಬಿನ್ ಶೇರುಬೇಗ್ ಅವರ ಮರಣದಿಂದ ತೆರವಾಗಿರುವ ಸದಸ್ಯ ಸ್ಥಾನವನ್ನು ತುಂಬಲು ಉಪಚುನಾವಣೆ ಘೋಷಿಸಲಾಗಿದ್ದು, ಸಂಬಂಧಿಸಿದಂತೆ ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ಚುನಾವಣೆ ವೇಳಾಪಟ್ಟಿಯನ್ನು ನಿಗಧಿಪಡಿಸಿದ್ದಾರೆ. ಚುನಾವಣಾ ವೇಳಾಪಟ್ಟಿಯನ್ವಯ ನಾಮಪತ್ರ ಸಲ್ಲಿಸಲು ಡಿ.15 ಕೊನೆಯ ದಿನ. ಡಿ.16 ನಾಮಪತ್ರಗಳ ಪರಿಶೀಲನೆ. ಡಿ. 18 ಉಮೇದುವಾರಿಕೆಗಳನ್ನು ಹಿಂಪಡೆಯಲು ಕೊನೆಯ ದಿನ. ಮತದಾನ ಅವಶ್ಯವಿದ್ದರೆ ಮತದಾನವನ್ನು ಡಿ. 27 ರಂದು ಬೆಳಿಗ್ಗೆ 7 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ನಡೆಸಲಾಗುವುದು. ಡಿ.30 ರೊಳಗೆ ಚುನಾವಣೆ ಪ್ರಕ್ರಿಯೆ ಮುಕ್ತಾಯಗೊಳ್ಳಲಿದೆ ಎಂದಿದ್ದಾರೆ.

### ಸರ್ವ ಸದಸ್ಯರ ಸಭೆ

» ಚಿತ್ರದುರ್ಗ

ಮೆದೆಹಳ್ಳಿ ರಸ್ತೆ, ಜೈನ್ ಕಾಲೋನಿಯಲ್ಲಿರುವ ಜಿಲ್ಲಾ ಹರಿಜನಾರ್ಥಿಕಾಭಿವೃದ್ಧಿ ಸೊಸೈಟಿಯಲ್ಲಿ ಕೆಲ ಕಾರ್ಯಕಾರಿ ಮಂಡಳಿ ಸದಸ್ಯರ ಅವ್ಯವ ಹಾರ, ಅಕ್ರಮ, ಸಂಘದ ಆಸ್ತಿಯಿಂದ ಬರುವ ಬಾಡಿಗೆ ಹಣ ದುರ್ಬಳಕೆ ವಿಚಾರಕ್ಕೆ ಸಂಬಂಧಿಸಿದಂತೆ ಜಿಲ್ಲಾ ಹರಿಜನಾರ್ಥಿಕಾಭಿವೃದ್ಧಿ ಹಿತರಕ್ಷಣಾ ಸಮಿತಿಯಿಂದ ಡಿ.9 ರ ಇಂದು ಬೆಳಿಗ್ಗೆ 11 ಗಂಟೆಗೆ ಪ್ರವಾಸಿ ಮಂದಿರದಲ್ಲಿ ಸಭೆ ಕರೆಯಲಾಗಿದೆ.

---

ಸರ್ಕಾರಿ ವಿದ್ಯಾರ್ಥಿ ನಿಲಯ, ವಸತಿ ಶಾಲೆಗಳಿಗೆ ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್ ದಿಢೀರ್ ಭೇಟಿ, ಪರಿಶೀಲನೆ

# ವಿದ್ಯಾರ್ಥಿಗಳೊಂದಿಗೆ ಸಂವಾದ: ಅಹವಾಲು ಆಲಿಕೆ

» ಚಿತ್ರದುರ್ಗ





ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯ ಜಿಲ್ಲೆಯ ವಿವಿಧೆಡೆ ಸರ್ಕಾರಿ ವಿದ್ಯಾರ್ಥಿ ನಿಲಯ ಹಾಗೂ ವಸತಿ ಶಾಲೆಗಳಿಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಅವರು ಶುಕ್ರವಾರ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನಗರದ ಸರ್ಕಾರಿ ಪಾಲಿಟೆಕ್ನಿಕ್ ಸಮೀಪದ ಸರ್ಕಾರಿ ಮೆಟ್ರಿಕ್ ನಂತರದ ವೃತ್ತಿಪರ ಕಾಲೇಜು ಬಾಲಕಿಯರ ವಿದ್ಯಾರ್ಥಿ ನಿಲಯ ಹಾಗೂ ಚಿತ್ರಹಳ್ಳಿಯ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆಗಳ ಸಮುಚ್ಚಯದ ವಸತಿ ಶಾಲೆಗಳಿಗೆ ದಿಢೀರ್ ಭೇಟಿ ನೀಡಿ, ವಿದ್ಯಾರ್ಥಿ ನಿಲಯ ಹಾಗೂ ವಸತಿ ಶಾಲೆಗಳ ಸ್ವಚ್ಛತೆ ಹಾಗೂ ಆಹಾರ ಗುಣಮಟ್ಟ ಪರಿಶೀಲಿಸಿದರು.

ಚಿತ್ರದುರ್ಗ ನಗರದ ಸರ್ಕಾರಿ ಪಾಲಿಟೆಕ್ನಿಕ್ ಸಮೀಪದ ಸರ್ಕಾರಿ ಮೆಟ್ರಿಕ್ ನಂತರದ ವೃತ್ತಿಪರ ಕಾಲೇಜು ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಭೇಟಿ ನೀಡಿದ ಅವರು, ವಿದ್ಯಾರ್ಥಿ ನಿಲಯದ ಅಡುಗೆ ಕೋಣೆ, ಡೈನಿಂಗ್ ಹಾಲ್, ಸ್ಟೋರ್ ರೂಂನಲ್ಲಿ ಶೇಖರಿಸಿಟ್ಟ ಅಕ್ಕಿ, ಬೇಳೆ, ಎಣ್ಣೆ, ತರಕಾರಿ ಸೇರಿದಂತೆ ಆಹಾರ ಪದಾರ್ಥಗಳ ವೀಕ್ಷಣೆ ಹಾಗೂ ಮೆನು ಚಾರ್ಟ್ ವೀಕ್ಷಿಸಿದ ಅವರು, ವಿದ್ಯಾರ್ಥಿ ನಿಲಯದಲ್ಲಿ ನೀಡುತ್ತಿರುವ ಸೌಲಭ್ಯಗಳು ಹಾಗೂ ಊಟದ ವ್ಯವಸ್ಥೆ ಪರಿಶೀಲನೆ ನಡೆಸಿದರು. ಅಡುಗೆ ಪದಾರ್ಥ ಸಂಗ್ರಹ ಕೊಠಡಿಯಲ್ಲಿ ಫಿನಾಯಿಲ್ ಬಾಟಲ್‌ಗಳನ್ನು ಇರಿಸಿದ್ದನ್ನು ಕಂಡು ಅಸಮಾಧಾನ ವ್ಯಕ್ತಪಡಿಸಿದ ಸಿಇಓ ಅವರು, ಕೂಡಲೆ ಫಿನಾಯಿಲ್ ಬಾಟಲ್‌ಗಳನ್ನು ಅಲ್ಲಿಂದ ಬೇರೆಡೆಗೆ ಸ್ಥಳಾಂತರಿಸುವಂತೆ ಸೂಚಿಸಿ, ಅಡುಗೆಗೆ ಬಳಸುವ ಪದಾರ್ಥಗಳನ್ನು ಸಂಗ್ರಹಿಸುವ ಕೊಠಡಿಗಳಲ್ಲಿ ಶೌಚಾಲಯ ಅಥವಾ ಸ್ನಾನಗೃಹಕ್ಕೆ ಬಳಸುವ ಸಾಮಗ್ರಿಗಳನ್ನು ದಾಸ್ತಾನು ಮಾಡದಂತೆ ಸೂಚನೆ ನೀಡಿದರು.

ಹಾಸ್ಟೆಲ್‌ನಲ್ಲಿ ದಾಖಲಾದ ವಿದ್ಯಾರ್ಥಿಗಳ ಸಂಖ್ಯೆ, ಹಾಜರಿರುವ ವಿದ್ಯಾರ್ಥಿಗಳ ಸಂಖ್ಯೆ, ಕುಡಿಯುವ ನೀರಿನ ವಾಟರ್ ಫಿಲ್ಟರ್ ನಿರ್ವಹಣೆ, ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ತರಬೇತಿ, ಗ್ರಂಥಾಲಯ ಸೌಲಭ್ಯ, ಮೂಲಸೌಕರ್ಯಗಳ ಪರಿಶೀಲನೆ ನಡೆಸಿ, ಹಾಸ್ಟೆಲ್ ನಲ್ಲಿನ ನಿರ್ವಹಣೆ, ಸ್ವಚ್ಛತೆ ವ್ಯವಸ್ಥೆ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ವಿದ್ಯಾರ್ಥಿ ನಿಲಯದ ಗ್ರಂಥಾಲಯಕ್ಕೆ ಭೇಟಿ ನೀಡಿ, ಅಲ್ಲಿನ ಪುಸ್ತಕಗಳ ಬಗ್ಗೆ ಪರಿಶೀಲನೆ ನಡೆಸಿದ ಅವರು, ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಾಗೂ ಆಯಾ ವೃತ್ತಿಪರ ಕೋರ್ಸ್‌ಗಳಿಗೆ ಅನುಕೂಲವಾಗುವಂತಹ ಪುಸ್ತಕಗಳು ಹಾಗೂ ಪ್ರಮುಖ ಲೇಖಕರ ಅತ್ಯುತ್ತಮ ಪುಸ್ತಕಗಳನ್ನು ವಿದ್ಯಾರ್ಥಿಗಳಿಗೆ ಓದಲು ಒದಗಿಸಬೇಕು ಎಂದು ಸೂಚಿಸಿದರು.

ಹಾಸ್ಟೆಲ್‌ಗಳಿಗೆ ಉತ್ತಮ ಸೌಲಭ್ಯಗಳಾದ ಶುದ್ಧ ಕುಡಿಯುವ ನೀರಿನ ಘಟಕ, ಮಕ್ಕಳಿಗೆ ಕಾಟ್‌ಗಳು, ಸೋಲಾರ್ ವ್ಯವಸ್ಥೆಗಳನ್ನು ಕಂಪನಿಗಳ ಸಿಎಸ್‌ಆರ್ ನಿಧಿಯಡಿ ಕೈಗೊಳ್ಳಲು ಯತ್ನಿಸಲಾಗುವುದು ಎಂದರು.

ಮಕ್ಕಳ ದೂರು ಪುಸ್ತಕ ನಿರ್ವಹಣೆಗೆ ಸೂಚನೆ: ಜಿಲ್ಲೆಯ ಎಲ್ಲಾ ವಿದ್ಯಾರ್ಥಿ ನಿಲಯಗಳಲ್ಲಿ ಕಡ್ಡಾಯವಾಗಿ ಮಕ್ಕಳ ದೂರು ಪುಸ್ತಕ ನಿರ್ವಹಣೆ ಮಾಡುವಂತೆ ಜಿಲ್ಲಾ ಪಂಚಾಯಿತಿ ಸಿಇಓ ಎಸ್. ಜೆ.ಸೋಮಶೇಖರ್ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು, ಅಲ್ಲದೆ ಹಿಂದುಳಿದ ವರ್ಗ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳಲ್ಲೂ ತಪ್ಪದೆ ದೂರು ಪುಸ್ತಕ ನಿರ್ವಹಣೆ ಮಾಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.

ವಿದ್ಯಾರ್ಥಿಗಳನ್ನು ನಿಮ್ಮ ಮಕ್ಕಳಂತೆ ನೋಡಿಕೊಳ್ಳಿ: ಸರ್ಕಾರಿ ವಿದ್ಯಾರ್ಥಿ ನಿಲಯ ಹಾಗೂ ವಸತಿ ಶಾಲೆಗಳಲ್ಲಿ ವ್ಯಾಸಂಗ ಮಾಡಲು ಬರುವ ಮಕ್ಕಳು ಸಾಮಾನ್ಯವಾಗಿ ಬಡವರ ಮನೆಯ ಮಕ್ಕಳಾಗಿರುತ್ತಾರೆ. ಮನೆಯ ವಾತಾವರಣದಿಂದ ಸರ್ಕಾರಿ ಹಾಸ್ಟೆಲ್‌ಗಳಿಗೆ ಬಂದಿರುತ್ತಾರೆ. ಹೀಗಾಗಿ ಹಾಸ್ಟೆಲ್‌ಗಳಲ್ಲಿನ ವಿದ್ಯಾರ್ಥಿಗಳನ್ನು ವಾರ್ಡನ್‌ಗಳು, ಸಿಬ್ಬಂದಿಗಳು ಕೂಡ ತಮ್ಮ ಮಕ್ಕಳಂತೆಯೇ ನೋಡಿಕೊಳ್ಳಬೇಕು ಎಂದು ಜಿ.ಪಂ ಸಿಇಓ ಸೋಮಶೇಖರ್ ನಿಲಯಪಾಲಕರಿಗೆ ಸೂಚನೆ ನೀಡಿದರು.

ಮಕ್ಕಳೊಂದಿಗೆ ಸಂವಾದ: ಚಿತ್ರಹಳ್ಳಿಯ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸಮುಚ್ಚಯದ ವಸತಿ ಶಾಲೆಗಳಿಗೆ ಭೇಟಿ ನೀಡಿದ ಜಿ.ಪಂ ಸಿಇಓ, ವಸತಿ ಶಾಲೆಯ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ, ಶಿಕ್ಷಣ ಹಾಗೂ ವಸತಿ ಶಾಲೆಯ ಸೌಲಭ್ಯಗಳ ಕುರಿತು ಮಾಹಿತಿ ಪಡೆದುಕೊಂಡರು, ಅಲ್ಲದೆ ಮಕ್ಕಳ ಅನುಕೂಲಕ್ಕೆ ಹಾಸ್ಟೆಲ್‌ಗೆ ಇನ್ನು ಏನೇನು ಸವಲತ್ತು ನೀಡಬೇಕು ಎಂದು ಸಲಹೆಯನ್ನೂ ಕೂಡ ಕೇಳಿದರು. ವಸತಿ ಶಾಲೆಯಲ್ಲಿ ನಿಮ್ಮನ್ನು ಚೆನ್ನಾಗಿ ನೋಡಿಕೊಳ್ಳುತ್ತಾರೆಯೇ, ಗುಣಮಟ್ಟದ, ಶುಚಿರುಚಿಯಾದ ಊಟ ನೀಡುತ್ತಾರೆಯೇ, ತಿಂಗಳಿಗೊಮ್ಮೆ ಸೋಪು, ಕೊಬ್ಬರಿಎಣ್ಣೆ, ಮತ್ತಿತರ ಸಾಮಗ್ರಿಯ ಕಿಟ್ ನೀಡುತ್ತಾರೆಯೇ ಎಂದು ವಸತಿ ಶಾಲೆಯ ವಿದ್ಯಾರ್ಥಿಗಳನ್ನು ಪ್ರಶ್ನಿಸಿದ ಅವರು, ವಿದ್ಯಾರ್ಥಿಗಳು ವ್ಯಾಸಂಗದ ಕಡೆಗೆ ಹೆಚ್ಚಿನ ಗಮನ ನೀಡಬೇಕು. ನಿಮಗಾಗಿ ಸರ್ಕಾರ ಹಣ ಖರ್ಚು ಮಾಡಿ ಓದಲು ವ್ಯವಸ್ಥೆ ಮಾಡಿದೆ, ಭವಿಷ್ಯದಲ್ಲಿ ನೀವು ಕೂಡ ಸಮಾಜಕ್ಕೆ ಉತ್ತಮ ಕೊಡುಗೆ ನೀಡಬೇಕು, ವಿದ್ಯಾವಂತರಾಗಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದರು.

ಹಾಸ್ಟೆಲ್ ಊಟ ಸವಿದ ಸಿಇಓ : ಚಿತ್ರಹಳ್ಳಿಯ ಕಿತ್ತೂರು ರಾಣಿ ಚನ್ನಮ್ಮ ಬಾಲಕಿಯರ ವಸತಿ ನಿಲಯಕ್ಕೆ ಭೇಟಿ ನೀಡಿದ ಸಿಇಓ ಸೋಮಶೇಖರ್ ಅವರು, ಹಾಸ್ಟೆಲ್ ನಲ್ಲಿಯೇ ಮುದ್ದೆ, ಅನ್ನ ಸಾಂಬಾರ್, ಮಜ್ಜಿಗೆ ಊಟ ಸವಿದು, ಊಟದ ಗುಣಮಟ್ಟದ ಬಗ್ಗೆ ತೃಪ್ತಿ ವ್ಯಕ್ತಪಡಿಸಿದರು. ಮಕ್ಕಳಿಗೆ ಎಲ್ಲ ಹಾಸ್ಟೆಲ್‌ಗಳಲ್ಲಿ ನಿಗದಿತ ಮೆನುವಿನಂತೆಯೇ ಊಟೋಪಹಾರ ತಯಾರಿಸಿ ನೀಡಬೇಕು, ತಾಜಾ ತರಕಾರಿಯನ್ನೇ ಬಳಸಬೇಕು, ಗುಣಮಟ್ಟದಲ್ಲಿ ಯಾವುದೇ ಕಾರಣಕ್ಕೂ ಕಳಪೆಯಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಸೂಚನೆ ನೀಡಿದರು.

ನೀರು ಪರೀಕ್ಷೆಗೆ ಸೂಚನೆ: ಜಿಲ್ಲೆಯ ಎಲ್ಲ ವಿದ್ಯಾರ್ಥಿ ನಿಲಯ ಹಾಗೂ ವಸತಿ ಶಾಲೆಗಳ ಕುಡಿಯುವ ನೀರನ್ನು ನಿಯಮಿತವಾಗಿ ಪರೀಕ್ಷೆಗೆ ಒಳಪಡಿಸಿ, ವಿದ್ಯಾರ್ಥಿಗಳಿಗೆ ಶುದ್ಧ ಕುಡಿಯುವ ನೀರು ಒದಗಿಸುವಂತೆ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ತಿಳಿಸಿದರು. ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಸೇರಿದಂತೆ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಕೃಷ್ಣಮೂರ್ತಿ ಹಾಗೂ ನಿಲಯ ಪಾಲಕರು, ವಸತಿ ಶಾಲೆಯ ಪ್ರಾಂಶುಪಾಲರು, ಶಿಕ್ಷಕರು ಇದ್ದರು.

---



ನಾಯಕನಹಟ್ಟಿ ಹೋಬಳಿಯ ಕುಧಾಪುರ ಗ್ರಾಮದ ಸರ್ಕಲ್ ಇನ್ಸ್‌ಪೆಕ್ಟರ್ ಜಿ.ಬಿ. ಉಮೇಶ್‌ರವರ 43ನೇ ವರ್ಷದ ಹುಟ್ಟು ಹಬ್ಬದ ಪ್ರಯುಕ್ತ ನಡೆದ ಜಿಲ್ಲಾ ಮಟ್ಟದ ಕ್ರಿಕೆಟ್ ಟೂರ್ನಮೆಂಟ್ ನಡೆಯಿತು. ಕುಧಾಪುರ ಗ್ರಾಮದ ಯುವಕರು, ಯುವತಿಯರು ಕ್ರೀಡಾಪಟುಗಳ ಪ್ರೋತ್ಸಾಹದಿಂದ ಬೈರಲಿಂಗೇಶ್ವರ ತಂಡ ಕೊನೆಯ ಪಂದ್ಯದಲ್ಲಿ ಪ್ರಥಮ ಸ್ಥಾನ ಪಡೆಯಿತು. ದ್ವಿತೀಯ ಸ್ಥಾನ ನಾಯಕನಹಟ್ಟಿ ಪಡೆಯಿತು. ಈ ಸಂದರ್ಭದಲ್ಲಿ ಉಪಸ್ಥಿತರಾದ ಜಿ.ಬಿ.ಲೋಕೇಶ್, ತ್ರಿಶೂಲ್‌ಕುಮಾರ್, ಅಂಜಿನಿ, ಚಂದ್ರಣ್ಣ, ಸತೀಶ್ ಹಾಗೂ ಊರಿನ ಗ್ರಾಮಸ್ಥರು ಯುವಕರು ಇದ್ದರು.




ಚಿತ್ರದುರ್ಗ ನಗರದ ಬಿಡಿ ರಸ್ತೆಯ ಎಚ್‌ಡಿಎಫ್‌ಸಿ ಬ್ಯಾಂಕ್ ಶಾಖೆ ವತಿಯಿಂದ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರದಲ್ಲಿ 53ಮಂದಿ ರಕ್ತದಾನ ಮಾಡಿದರು. ಈ ಸಂದರ್ಭದಲ್ಲಿ ಯೋಗೀಶ.ಬಿ.ವೈ ಸ್ಪೆಷಲ್ ಆಫೀಸರ್ ಚಿತ್ರದುರ್ಗ ಮೆಡಿಕಲ್ ಕಾಲೇಜ್, ಎಚ್‌ಡಿಎಫ್‌ಸಿ ಬ್ಯಾಂಕ್ ಕ್ಲಸ್ಟರ್ ಹೆಡ್ ಸತೀಶ್ ಸಿಬಿ, ವ್ಯವಸ್ಥಾಪಕರು ರಘು ಬಿವಿ, ಅಗ್ರಿ ಬಿಜಿನೆಸ್ ಕ್ಲಸ್ಟರ್ ಗಿರೀಶ್ ಹೆಚ್ ಎಂ, ಮ್ಯಾನೇಜರ್ ಉಮೇಶ್ ಮತ್ತು ಮೋಹನ್ ಹಾಗೂ ಬ್ಯಾಂಕಿನ ಸಿಬ್ಬಂದಿಗಳ ಹಾಜರಿದ್ದರು.

---

### ಹೆಗಡೆ ನಗರದ ವಸತಿ ರಹಿತರಿಗೆ ತಾತ್ಕಾಲಿಕ ವ್ಯವಸ್ಥೆ, ಯೋಗ ಕ್ಷೇಮ ವಿಚಾರಿಸಿದ ಎಸ್ಸೆಸ್

**ದಾವಣಗೆರೆ:** ನಗರದ ಪಿ.ಬಿ ರಸ್ತೆಯಿಂದ ಮಾಗಾನಹಳ್ಳಿ ರಸ್ತೆಯವರೆಗೆ ರಿಂಗ್ ರಸ್ತೆ ನಿರ್ಮಾಣ ಮಾಡಲು ರಾಮಕೃಷ್ಣ ಹೆಗಡೆ ನಗರದಲ್ಲಿನ ವಸತಿ ರಹಿತ ಒತ್ತುವರಿದಾರರನ್ನು ತೆರವು ಗೊಳಿಸಿ, ದೊಡ್ಡಬಾತಿ ಸಮೀಪದಲ್ಲಿರುವ ಖಾಲಿ ಜಾಗದಲ್ಲಿ ತಾತ್ಕಾಲಿಕ ಶೆಡ್ ನಿರ್ಮಿಸಿ ನಿವಾಸಿಗಳಿಗೆ ಪುನರ್ವಸತಿ ಕಲ್ಪಿಸಿದ್ದು, ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ಅವರೊಂದಿಗೆ ದಾವಣಗೆರೆ ದಕ್ಷಿಣಾ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ. ಶಾಮನೂರು ಶಿವಶಂಕರಪ್ಪ ಅವರು ಶುಕ್ರವಾರ ಸ್ಥಳ ಪರೀಶಿಲನೆ ನಡೆಸಿ ಮೂಲಭೂತ ಸೌಲಭ್ಯ ಒದಗಿಸಲು ಅಧಿಕಾರಿಗಳಿಗೆ ಸೂಚಿಸಿದರು. ಹಾಗೂ ಅಲ್ಲಿನ ನಿವಾಸಿಗಳಿಗೆ ಉಪಹಾರ ಉಣಬಡಿಸಿದರು.



### ಅಕ್ಕಿ ಹರಾಜು ಡಿ.12 ಕ್ಕೆ

**ದಾವಣಗೆರೆ:** ಜಿಲ್ಲೆಯ ಹರಿಹರ ತಾಲ್ಲೂಕು ವ್ಯಾಪ್ತಿಯ ವಿವಿಧ ಪ್ರದೇಶಗಳಲ್ಲಿ ಒಟ್ಟು 8 ಪ್ರಕರಣಗಳಡಿ ವಶಪಡಿಸಿಕೊಳ್ಳಲಾದ 167.24 ಕ್ವಿಂಟಾಲ್ ಅಕ್ಕಿ ಮತ್ತು 79.96 ಕ್ವಿಂಟಾಲ್ ರಾಗಿ ಪಡಿತರ ಧಾನ್ಯಗಳನ್ನು ಡಿ.12 ರಂದು ಬೆಳಿಗ್ಗೆ 10.30 ಗಂಟೆಗೆ ಹರಿಹರದ ಎ.ಪಿ.ಎಂ.ಸಿ ಆವರಣದಲ್ಲಿರುವ ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಗೋದಾಮಿನಲ್ಲಿ ಬಹಿರಂಗ ಹರಾಜು ಮಾಡಲಾಗುವುದು. ಆಸಕ್ತರು ಕಚೇರಿ ಕೆಲಸದ ಅವಧಿಯಲ್ಲಿ ಗೋದಾಮಿಗೆ ಭೇಟಿ ನೀಡಿ ದಾಸ್ತಾನು ಪರಿಶೀಲಿಸಲು ಹಾಗೂ ನಿಗಧಿತ ದಿನದಂದು ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಲು ಹರಿಹರ ತಾಲ್ಲೂಕು ತಹಶೀಲ್ದಾರ್ ಪೃಥ್ವಿ ಸಾನಿಕಂ ತಿಳಿಸಿದ್ದಾರೆ.

---

**ಪ್ರಮುಖ ಸುದ್ದಿ**

ಕಾಡುಗೊಲ್ಲ ಜಾತಿ ಪ್ರಮಾಣ ನೀಡಲು ವಿಳಂಭ

# ಚಳ್ಳಕೆರೆ ತಹಶೀಲ್ದಾರ್ ಕಾರು ಅಡ್ಡಗಟ್ಟಿ ಪ್ರತಿಭಟನೆ

» ಚಳ್ಳಕೆರೆ



ತಾಲ್ಲೂಕಿನ ಕಾಡುಗೊಲ್ಲರಿಗೆ ಜಾತಿಪ್ರಮಾಣ ಪತ್ರ ನೀಡಬೇಕೆಂದು ಒತ್ತಾಯಿಸಿ ತಾಲ್ಲೂಕು ಕಾಡುಗೊಲ್ಲರ ಸಂಘ ಅಧ್ಯಕ್ಷ ಬೂದಿಹಳ್ಳಿ ರಾಜಣ್ಣ ನೇತೃತ್ವದಲ್ಲಿ ಕಳೆದ ಹಲವಾರು ತಿಂಗಳಿನಿಂದ ಪ್ರತಿಭಟನೆ ನಡೆಸುತ್ತಿದ್ದರೂ ನೀಡದ ಹಿನ್ನಲೆಯಲ್ಲಿ ಶುಕ್ರವಾರವೂ ಸಹ ಕಾಡುಗೊಲ್ಲರಿಗೆ ಜಾತಿಪ್ರಮಾಣ ಪತ್ರ ನೀಡುವಂತೆ ಒತ್ತಾಯಿಸಿ ತಹಶೀಲ್ದಾರ್ ವಾಹನಕ್ಕೆ ಅಡ್ಡಮಲಗಿ ಪ್ರತಿಭಟನೆ ನಡೆಸಿದರು.

ತಾಲ್ಲೂಕು ಕಚೇರಿಗೆ ತಮ್ಮ ಖಾಸಗಿ ವಾಹನದಲ್ಲಿ ಆಗಮಿಸಿದ ತಹಶೀಲ್ದಾರ್ ರೇಹಾನ್ ಪಾಷರವರ ಕಾರನ್ನು ತಡೆದ ಪ್ರತಿಭಟನಕಾರರು ಅವರ ಕಾರಿಗೆ ಅಡ್ಡ ಮಲಗಿ ನಮ್ಮ ಸಮುದಾಯಕ್ಕೆ ಕಾಡುಗೊಲ್ಲರ ಜಾತಿಪ್ರಮಾಣ ಪತ್ರ ಕೂಡಲೇ ನೀಡಬೇಕೆಂದು ಆಗ್ರಹಿಸಿದ್ದಲ್ಲದೆ ತಹಶೀಲ್ದಾರ್‌ರವರನ್ನು ಗೆರಾವ್ ಸಹ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಬೂದಿಹಳ್ಳಿ ರಾಜಣ್ಣ, ಜಿಲ್ಲೆಯ ಬೇರೆ ತಾಲ್ಲೂಕುಗಳಲ್ಲಿ ತಹಶೀಲ್ದಾರರು ಕಾಡುಗೊಲ್ಲರಿಗೆ ಜಾತಿಪ್ರಮಾಣ ಪತ್ರ ನೀಡುತ್ತಿದ್ಧಾರೆ. ಕಳೆದ ಎರಡು ತಿಂಗಳ ಹಿಂದೆಯೇ ವಿವಿಧ ತಾಲ್ಲೂಕಿನ ಕಾಡುಗೊಲ್ಲರು ಜಾತಿಪ್ರಮಾಣ ಪತ್ರ ಪಡೆದಿದ್ಧಾರೆ. ಆದರೆ, ಚಳ್ಳಕೆರೆ ತಾಲ್ಲೂಕಿನಲ್ಲಿ ತಹಶೀಲ್ಧಾರ್‌ರವರು ಕಾನೂನಿನಲ್ಲಿ ಅವಕಾಶವಿದ್ದರೂ ಸಹ ಕಾಡುಗೊಲ್ಲರಿಗೆ ಜಾತಿಪ್ರಮಾಣ ಪತ್ರ ನೀಡುವಲ್ಲಿ ವಿಳಂಬ ನೀತಿ ಅನುಸರಿಸುತ್ತಿದ್ದಾರೆ. ಇದರಿಂದ ನಮ್ಮ ಸಮುದಾಯಕ್ಕೆ ಹೆಚ್ಚು ಅನ್ಯಾಯವಾಗಿದೆ. ಆದ್ದರಿಂದ ಪ್ರತಿಭಟನೆ ನಡೆಸಿದ್ದು, ತಹಶೀಲ್ಧಾರ್‌ರವರು ಕಾಡುಗೊಲ್ಲರಿಗೆ ಜಾತಿಪ್ರಮಾಣ ಪತ್ರ ನೀಡುವವರೆಗೂ ಇಲ್ಲಿಂದ ಯಾರೂ ಕದಲುವುದಿಲ್ಲ ಎಂದು ಪಟ್ಟುಹಿಡಿದರು. ಜಾತಿಪ್ರಮಾಣ ಪತ್ರ ಪಡೆದೇ ಪ್ರತಿಭಟನೆಯನ್ನು ವಾಪಾಸ್ ಪಡೆಯುತ್ತೇವೆಂದು ತಿಳಿಸಿದರು.

ತಹಶೀಲ್ಧಾರ್ ರೇಹಾನ್ ಪಾಷ ಮಾತನಾಡಿ, ಜಾತಿಪ್ರಮಾಣ ಪತ್ರ ನೀಡುವ ಬಗ್ಗೆ ಸರ್ಕಾರ ಈಗಾಗಲೇ ಕೆಲವೊಂದು ನಿರ್ಧಿಷ್ಟವಾದ ಮಾರ್ಗಸೂಚಿಗಳನ್ನು ನೀಡಲಾಗಿದೆ. ಪ್ರತಿಯೊಂದು ಅಂಶವನ್ನು ಪರಿಗಣಿಸಿ ಕಾಡುಗೊಲ್ಲ ಸಮುದಾಯಕ್ಕೆ ಪ್ರಮಾಣ ಪತ್ರ ನೀಡಬೇಕಿದೆ. ಈ ಹಿನ್ನೆಲೆಯಲ್ಲಿ ಈಗಾಗಲೇ ತಾಲ್ಲೂಕು ಮಟ್ಟದ ಅಧಿಕಾರಿಗಳ ಸಭೆ ನಡೆಸಿ ಮಾರ್ಗಸೂಚಿಗಳ ಆಧಾರದ ಮೇಲೆ ಪರಿಶೀಲನೆ ನಡೆಸಿ ಪ್ರಮಾಣಪತ್ರ ನೀಡಲು ನಿರ್ಧರಿಸಿದೆ. ಈಗಾಗಲೇ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದು, ಪರಿಶೀಲನೆ ನಂತರ ಜಾತಿಪ್ರಮಾಣ ಪತ್ರ ನೀಡಲಾಗುವುದು ಎಂದರು. ಕರಿಯಪ್ಪ, ಮೀಸೆಮಹಲಿಂಗಪ್ಪ, ಶಿವಮೂರ್ತಿ, ಶ್ರೀನಿವಾಸ್, ಭಾನುವೀರೇಶ್, ಮಂಜುನಾಥ, ಮೂಡಲಗಿರಿಯಪ್ಪ, ನಿಸರ್ಗಗೋವಿಂದರಾಜು, ಎಚ್.ಮಹಲಿಂಗಪ್ಪ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಮಕ್ಕಳನ್ನು ತೊಟ್ಟಿಯಲ್ಲಿ ಮುಳುಗಿಸಿ ತಾನು ನೇಣಿಗೆ ಶರಣಾದ ತಾಯಿ ಲತಾ



» **ಚಳ್ಳಕೆರೆ**

ತಾಲ್ಲೂಕಿನ ಯಲಗಟ್ಟೆಯಲ್ಲಿ ಗೃಹಿಣಿ ತನ್ನ ಎರಡೂ ಮಕ್ಕಳನ್ನು ನೀರಿನ ತೊಟ್ಟಿಯಲ್ಲಿ ಮುಳುಗಿಸಿ, ನಂತರ ತಾನೂ ಬಚ್ಚಲು ಮನೆಯಲ್ಲಿ ನೇಣು ಹಾಕಿಕೊಂಡು ಮೃತಪಟ್ಟ ಘಟನೆ ಶುಕ್ರವಾರ ಬೆಳಗ್ಗೆ ನಡೆದಿದೆ. ಯಲಗಟ್ಟೆ ಗ್ರಾಮದ ತಿಪ್ಪೇಸ್ವಾಮಿ ಎಂಬುವವರ ಪತ್ನಿ ಲತಾ(25), ತನ್ನ ಮಕ್ಕಳಾದ ಪ್ರಣೀತಾ(5), ಒಂದೂವರೆ ವರ್ಷ ಹಸಿಗೂಸು ಜ್ಞಾನೇಶ್ವರನನ್ನು ಮನೆಯ ಬಚ್ಚಲಿನಲ್ಲಿದ್ದ ನೀರಿನ ತೊಟ್ಟಿಯಲ್ಲಿ ಮುಳುಗಿಸಿ ನಂತರ ತಾನು ನೇಣುಹಾಕಿಕೊಂಡು ಮೃತಪಟ್ಟಿರುತ್ತಾಳೆ. ಈ ಸಂದರ್ಭದಲ್ಲಿ ಗಂಡ ತಿಪ್ಪೇಸ್ವಾಮಿ ತನ್ನ ತೋಟಕ್ಕೆ ಹೋಗಿದ್ದು ವಿಷಯ ತಿಳಿದು ಗಾಬರಿಯಾಗಿ ಸ್ಥಳಕ್ಕೆ ಬಂದು ನೋಡಿದಾಗ ತನ್ನ ಮಕ್ಕಳು ಹಾಗೂ ಹೆಂಡತಿ ಮೃತಪಟ್ಟಿರುತ್ತಾಳೆ. ಗಾಬರಿಗೊಂಡ ತಿಪ್ಪೇಸ್ವಾಮಿ ಅವರನ್ನು ಸಾರ್ವಜನಿಕ ಆಸ್ಪತ್ರೆಗೆ ತಂದು ದಾಖಲಿಸಿದಾಗ ಪರೀಕ್ಷೆ ನಡೆಸಿದ ವೈದ್ಯರು ಮಕ್ಕಳು ಹಾಗೂ ಪತ್ನಿ ಮೃತಪಟ್ಟಿರುವುದಾಗಿ ತಿಳಿಸಿದ್ದಾರೆ. ಗ್ರಾಮದಲ್ಲಿ ನಡೆದ ಈ ಘಟನೆ ಗ್ರಾಮಸ್ಥರಲ್ಲಿ ಕಳವಳ ಉಂಟು ಮಾಡಿದ್ದು ಗ್ರಾಮದಲ್ಲಿ ನೀರವಮೌನ ಆವರಿಸಿದೆ. ಪತ್ನಿ ಲತಾ ಹಾಗೂ ಮಕ್ಕಳ ಸಾವಿನ ಬಗ್ಗೆ ಲತಾಳ ಬಂಧುಗಳು ಪೊಲೀಸರಿಗೆ ದೂರು ನೀಡಿರುತ್ತಾರೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ.

### ಇಂದಿನಿಂದ ನಿಜಲಿಂಗಪ್ಪನವರ ಸವಿನೆನಪಿನ ಸ್ಮರಣೆ

» **ಹೊಸದುರ್ಗ**

ಮಾಜಿ ಮುಖ್ಯ ಮಂತ್ರಿ, ಹಿರಿಯ ಮುತ್ಸದ್ದಿ, ಅಪ್ಪರ್ ಭದ್ರಾ ಯೋಜನೆಯ ಮಹಾನ್ ಕನಸುಗಾರ ಹಾಗೂ ಶಿಕ್ಷಣ ಪ್ರೇಮಿ ಎಸ್.ನಿಜಲಿಂಗಪ್ಪನವರ ಆದರ್ಶಗಳನ್ನು ಇಟ್ಟುಕೊಂಡು ಇಂದು ನಾವೆಲ್ಲರು ಜೀವನವನ್ನು ಸಾಗಿಸಬೇಕಾಗಿದೆ, ಈ ಭಾರಿಯ ಅವರ ಹುಟ್ಟು ಹಬ್ಬವನ್ನು ವಿಶೇಷವಾಗಿ ಆಚರಿಸುವ ನಿಟ್ಟಿನಲ್ಲಿ ಹೊಸದುರ್ಗ ಪಟ್ಟಣದ ಪ್ರತಿಷ್ಠಿತ ಸಂಸ್ಥೆಯಾದ ಎಸ್.ನಿಜಲಿಂಗಪ್ಪ ವಿದ್ಯಾ ಸಂಸ್ಥೆಯ ಆವರಣದಲ್ಲಿ ಈ ವರ್ಷ ವಿಶೇಷವಾಗಿ ಡಿಸೆಂಬರ್ 9 ರಿಂದ ಡಿ. 11 ರವರೆಗೆ ಒಟ್ಟು ಮೂರು ದಿನಗಳ ಕಾಲ ಅವರ ಸವಿನೆನಪಿನ ಸ್ಮರಣೆಯನ್ನು ಹಾಗೂ ಸಂಸ್ಥೆಯ ಶಾಲಾ ಕಾಲೇಜು ಮಕ್ಕಳ ವೈಭವ ಹಾಗೂ ವರ್ಣರಂಜಿತ ಸಾಂಸ್ಕೃತಿಕ ಕಾರ್ಯಕ್ರಮವನ್ನ ಈ ಭಾರಿ ಮೂರು ದಿನಗಳ ಕಾಲ ಆಯೋಜಿಸಿರುವುದು ಎಲ್ಲರಲ್ಲೂ ಸಂತಸವನ್ನ ತಂದಿದೆ ಅದರಲ್ಲೂ ಈ ಸಂಸ್ಥೆಯಲ್ಲಿ ಜ್ಞಾನಾರ್ಜನೆ ಮಾಡುತ್ತಿರುವ ವಿದ್ಯಾರ್ಥಿಗಳಿಗಂತು ಸ್ವರ್ಗಕ್ಕೆ ಮೂರೇ ಗೇಣು ಎನ್ನುವಂತಾಗಿದೆ.ಈ ಕುರಿತು ಮಾಹಿತಿಯನ್ನ ಹಂಚಿಕೊಂಡ ಎಸ್.ನಿಜಲಿಂಗಪ್ಪ ಎಜುಕೇಷನ್ ಅಂಡ್ ರೂರಲ್ ಡೆವಲಪ್‌ಮೆಂಟ್ ಟ್ರಸ್ಟ್‌ನ ಕಾರ್ಯದರ್ಶಿ ಕೆ.ಎಸ್ ಕಲ್ಮಠ್

ಎಸ್.ನಿಜಲಿಂಗಪ್ಪನವರ ಹುಟ್ಟು ಹಬ್ಬವನ್ನು ವಿಶೇಷವಾಗಿ ಆಚರಿಸುವ ನಿಟ್ಟಿನಲ್ಲಿ ಇದೇ ಡಿಸೆಂಬರ್ 9 ರಿಂದ 11 ಮೂರು ದಿನಗಳ ಕಾಲ ಅವರ ಸವಿನೆನಪಿನ ಸ್ಮರಣೆಯನ್ನು ಮಾಡಲಾಗುತ್ತಿದೆ. ಡಿಸೆಂಬರ್ 9 ರಂದು ನೊಣವಿನಕೆರೆ ಗ್ರಾಮದ ಶ್ರೀಗಳಾದ ಕರಿಶುಭ ದೇಶಿ ಕೇಂದ್ರದ ಸ್ವಾಮೀಜಿ ಅವರು ಆಗಮಿಸಿ ಇಷ್ಟು ಲಿಂಗ ಪೂಜೆ ನೆರವೇರಿಸಲಿದ್ದಾರೆ..ಕಾರ್ಯಕ್ರಮದಲ್ಲಿ ರಾಜ್ಯಸಭಾ ಸದಸ್ಯರಾದ ಎಚ್.ಹನುಮಂತಪ್ಪ ವೀರಶೈವ ಮುಖಂಡರಾದ ಷಣ್ಮುಖಪ್ಪ. ಜಿಲ್ಲೆಯ ಪ್ರಮುಖ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದಂತಹ ಗಣ್ಯ ವ್ಯಕ್ತಿಗಳಿಗೆ ಸನ್ಮಾನವನ್ನು ಮಾಡಲಾಗುವುದು ಎಂದು ಮಾಹಿತಿ ನೀಡಿದ ಅವರು ಡಿಸೆಂಬರ್ 10 ರಂದು ಶ್ರೀ ರಾಮಕೃಷ್ಣ ಆಶ್ರಮ ಪಾವಗಡದ ಶ್ರೀ ಸ್ವಾಮಿ ಜಪಾನಂದಜಿ ಅವರು ಆಗಮಿಸಿ ವಿಶೇಷ ಪ್ರವಚನ ನೀಡಲಿದ್ದಾರೆ ಇದೇ ದಿನ ಎಸ್. ನಿಜಲಿಂಗಪ್ಪನವರ ಮಕ್ಕಳಾದ ಕಿರಣ್ ಶಂಕರ್ ಎಸ್.ಎನ್ ಹಾಗೂ ಶ್ರೀಮತಿ ಪ್ರತಿಭಾದೇವಿ ಎಸ್. ಎನ್ ಸೇರಿದಂತೆ ಹಲವು ಗಣ್ಯರಿಂದ ಸಂಜೆ 6 ಗಂಟೆಗೆ ಎಸ್. ಜಲಿಂಗಪ್ಪನವರ ಪುತ್ಥಳಿ ಅನಾವರಣಗೊಳ್ಳಲಿದೆ. ಡಿ.11 ರಂದು 2024ರ ನಿಜಲಿಂಗಪ್ಪ ಸಂಸ್ಥೆಯ ಶೈಕ್ಷಣಿಕ ಮಾರ್ಗಸೂಚಿ ಅನಾವರಣ ಮತ್ತು ವಿಶೇಷ ಪ್ರವಚನ ಕಾರ್ಯಕ್ರಮ ನಡೆಯಲಿದ್ದು ವಿಶೇಷ ಸಾಧನೆ ಮಾಡಿರುವ ಸಾಧಕರನ್ನು ಗುರುತಿಸಿ ಅವರಿಗೆ ಅಭಿನಂದನೆ ಸಲ್ಲಿಸಲಾಗುವುದು. ಪ್ರತಿದಿನ ಸಂಜೆ 6 ರಿಂದ ರಾತ್ರಿ 10 ಗಂಟೆಯವರೆಗೆ ಶಾಲಾ ಹಾಗೂ ಕಾಲೇಜು ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆಎಂದುಮಾಹಿತಿನೀಡಿದರು.ಶಿಕ್ಷಣದಲ್ಲಿ ಹೊಸ ಆಯಾಮ:ನಮ್ಮ ಶಿಕ್ಷಣ ಸಂಸ್ಥೆ ಎರಡು ದಶಕಗಳಿಂದಲೂ ಸಹಾ ಪ್ರಾಮಾಣಿಕವಾಗಿ ಕಾರ್ಯ ನಿರ್ವಹಿಸುತ್ತಾ ಬಂದಿದೆ ಶಿಕ್ಷಣವನ್ನು ನೀಡುವುದರ ಮೂಲಕ ಹೊಸ ಆಯಾಮವನ್ನು ಸೃಷ್ಟಿಸಿದೆ ಶಿಕ್ಷಣ ಸಂಸ್ಥೆಗೆ ಎಸ್ ನಿಜಲಿಂಗಪ್ಪನವರ ನಾಮಕರಣ ಮಾಡಿದ್ದು ಅವರ ಪ್ರಾಮಾಣಿಕತೆ ಅವರ ನಿಷ್ಠೆ ನಾಡಿಗೆ ಮಾದರಿಯಾಗಿದೆ.

# ಸಿದ್ದು ಸರ್ಕಾರ ವಜಾಕ್ಕೆ ಆಗ್ರಹಿಸಿ ಪ್ರತಿಭಟನೆ

» **ಚಿತ್ರದುರ್ಗ**



ಮುಸ್ಲಿಂ ಧರ್ಮಗುರುಗಳ ಸಮಾವೇಶದಲ್ಲಿ ಕರ್ನಾಟಕ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮುಸ್ಲಿಮರಿಗೆ ಹತ್ತು ಸಾವಿರ ಕೋಟಿ ರೂಪಾಯಿಗಳನ್ನು ಕೊಡುತ್ತೇನೆ ಎಂದು ಹೇಳಿರುವುದು ಸಂವಿಧಾನಕ್ಕೆ ವಿರೋಧವಾಗಿದ್ದು, ಸಿದ್ದರಾಮಯ್ಯನವರ ಸರಕಾರವನ್ನು ವಜಾಮಾಡಬೇಕು, ಮತ್ತು ಹುಬ್ಬಳ್ಳಿಯಲ್ಲಿ ನಡೆದ ಮುಸ್ಲಿಂ ಧರ್ಮಗುರುಗಳ ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಶಂಕಿತ ಐಸಿಸ್ ಬೆಂಬಲಿಗನೊಂದಿಗೆ ವೇದಿಕೆ ಹಂಚಿಕೊಂಡ ಪ್ರಕರಣವನ್ನು ಉನ್ನತ ಮಟ್ಟದ ತನಿಖೆ ಮಾಡಿ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್‌ರವರಿಗೆ ಜಿಲ್ಲಾ ಬಜರಂಗದಳ ಮತ್ತು ವಿಶ್ವ ಹಿಂದೂ ಪರಿಷತ್ ಮನವಿ ಮಾಡಿದರು.

ಚಿತ್ರದುರ್ಗ ನಗರದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಬಳಿ ಪ್ರತಿಭಟನೆಯನ್ನು ನಡೆಸಿದ ಜಿಲ್ಲಾ ಬಜರಂಗದಳ ಮತ್ತು ವಿಶ್ವ ಹಿಂದೂ ಪರಿಷತ್‌ನ ಪದಾಧಿಕಾರಿಗಳು, 04 ಡಿಸೆಂಬರ್ 2023 ಸೋಮವಾರದ ದಿನ ಹುಬ್ಬಳ್ಳಿಯಲ್ಲಿ ನಡೆದ ಮುಸ್ಲಿಂ ಧರ್ಮಗುರುಗಳ ಸಮಾವೇಶದಲ್ಲಿ ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಭೆಯನ್ನು ಉದ್ದೇಶಿಸಿ ಮಾತನಾಡಿ ಈಗಾಗಲೇ ನಾಲ್ಕು ಸಾವಿರ ಕೋಟಿ ಅನುದಾನ ನೀಡಿದ್ದು, ಮುಂದಿನ ವರ್ಷ ಮುಸ್ಲಿಮರಿಗೆ ಹತ್ತು ಸಾವಿರ ಕೋಟಿ ಅನುದಾನ ಖಂಡಿತವಾಗಿ ಕೊಡುತ್ತೇನೆ ಎಂದು ಹೇಳಿಕೆಯನ್ನು ಕೊಟ್ಟಿದ್ದಾರೆ. ಈ ಹೇಳಿಕೆಯು ಸಂವಿಧಾನ ವಿರೋಧಿಯಾಗಿದೆ. ಮುಸ್ಲಿಮರಿಗೆ ಪ್ರತ್ಯೇಕ ಅನುದಾನ ಕೊಡಲು ನಮ್ಮ ಸಂವಿಧಾನದಲ್ಲಿ ಅವಕಾಶವಿರುವುದಿಲ್ಲ. ಅಲ್ಪಸಂಖ್ಯಾತರ ಹಿತರಕ್ಷಣೆ ಪ್ರಕಾರ ಭಾರತದ ಯಾವುದೇ ರಾಜ್ಯ ಅಥವಾ ಯಾವುದೇ ಭಾಗದಲ್ಲಿ ವಾಸವಾಗಿರುವ ನಾಗರೀಕರ ಯಾವುದೇ ವಿಭಾಗವು, ತನ್ನದೇ ಆದ ವಿಶಿಷ್ಟ ಭಾಷೆ, ಲಿಪಿ ಅಥವಾ ಸಂಸ್ಕೃತಿಯನ್ನು ಹೊಂದಿದ್ದರೆ ಅವುಗಳನ್ನು ರಕ್ಷಿಸುವ ಹಕ್ಕು ಉಳ್ಳತಕ್ಕದ್ದು. ಆದರೆ ಮುಸ್ಲಿಂ ಸಮುದಾಯಕ್ಕೆ ವಿಶಿಷ್ಟ ಭಾಷೆ, ಲಿಪಿ, ಸಂಪ್ರದಾಯಗಳು ಇಲ್ಲದಿರುವುದರಿಂದ ಸದರಿ ಆರ್ಟಿಕಲ್ ವ್ಯಾಖ್ಯೆಯ ಪ್ರಕಾರ ಅವರಿಗೆ ವಿಶೇಷ ಅನುದಾನ ನೀಡಲು ಸಂವಿಧಾನದಲ್ಲಿ ಅವಕಾಶವಿರುವುದಿಲ್ಲ.

ಂಡಿಣಛಿಟಜ-30 ರ ಪ್ರಕಾರ ಧಾರ್ಮಿಕ ಅಥವಾ ಭಾಷಾ ಅಲ್ಪಸಂಖ್ಯಾತರಿಗೆ ಬೇಕಾದ ಶೈಕ್ಷಣಿಕ ಸಂಸ್ಥೆ ಸ್ಥಾಪಿಸಲು, ನಡೆಸಲು ಮಾತ್ರ ಹಕ್ಕು ಕೊಟ್ಟಿದೆ. ಆದರಿಂದ ಈ ಂಡಿಣಛಿಟಜ-30 ರ ಪ್ರಕಾರ ಮುಸ್ಲಿಮರಿಗೆ ವಿಶೇಷ ಅನುದಾನಕ್ಕೆ ಅವಕಾಶವಿಲ್ಲ. ಅಲ್ಪಸಂಖ್ಯಾತರಲ್ಲಿ ಆರು ಧರ್ಮೀಯರಿದ್ದು ಅವುಗಳನ್ನು ಸಮಾನವಾಗಿ ನೋಡಬೇಕಾಗಿರುವಾಗ, ಮುಸ್ಲಿಂ ಒಂದು ಸಮುದಾಯಕ್ಕೆ ಮಾತ್ರ ಅದು ಅಗಾಧ ಪ್ರಮಾಣದಲ್ಲಿ ಅನುದಾನ ನೀಡಿರುವುದು ಮತ್ತು ಮುಂದಿನ ದಿನಗಳಲ್ಲಿ ಇನ್ನಷ್ಟು ಅನುದಾನ ನೀಡಲು ಉದ್ದೇಶಿಸಿರುವುದು ಸಂವಿಧಾನ ಬಾಹಿರವಾಗಿದೆ. ಮಾತ್ರವಲ್ಲ ಇದು ರಾಜ್ಯದಲ್ಲಿ ಸಾಮರಸ್ಯಕ್ಕೆ ಧಕ್ಕೆ ತರುವಂತಹ ಕೆಲಸವಾಗಿರುತ್ತದೆ. ಈ ಎಲ್ಲಾ ಕಾರಣದಿಂದಾಗಿ ಸಂವಿಧಾನ ವಿರೋಧವಾಗಿ ರಾಜ್ಯದ ಖಜಾನೆಯ ಹಣವನ್ನು ಅಗಾಧ ಪ್ರಮಾಣದಲ್ಲಿ ಖರ್ಚು ಮಾಡುತ್ತಿರುವುದು ತಮ್ಮ ಗಮನಕ್ಕೆ ತರುತ್ತಿದ್ದೇವೆ. ಅದರಿಂದ ತಕ್ಷಣ ಸಿದ್ದರಾಮಯ್ಯ ಸರಕಾರವನ್ನು ವಜಾಗೊಳಿಸಲು ಆಗ್ರಹಿಸಲಾಯಿತು.

04 ಡಿಸೆಂಬರ್ 2023 ನೆಯ ಸೋಮವಾರ ಹುಬ್ಬಳ್ಳಿಯಲ್ಲಿ ನಡೆದ ಮುಸ್ಲಿಂ ಧರ್ಮಗುರುಗಳ ಸಮಾವೇಶದಲ್ಲಿ ಸಿದ್ದರಾಮಯ್ಯನವರ ಜೊತೆ ಅದೇ ವೇದಿಕೆಯಲ್ಲಿ, ವೇದಿಕೆ ಹಂಚಿಕೊಂಡ ತನ್ವೀರ್ ಪೀರಾ ಎಂಬ ಮುಸ್ಲಿಂ ಮೌಲ್ವಿಗೆ ಶಂಕಿತ ಭಯೋತ್ಪಾದಕ ಸಂಘಟನೆಗಳ ಜೊತೆ ನಂಟು ಇರುವುದು ಮಾಧ್ಯಮಗಳ ಮೂಲಕ ಬಹಿರಂಗವಾಗಿದೆ. ಇದಕ್ಕೆ ಪೂರಕವಾಗಿ ವಿಧಾನಸಭಾ ಸದಸ್ಯರಾದ ಬಸವನ ಗೌಡ ಯತ್ನಾಳ್ ರವರು ಟ್ವಿಟ್ಟರ್ ಮೂಲಕ "ತನ್ವೀರ್ ಪೀರಾ ಎಂಬ ವ್ಯಕ್ತಿಗೆ ಭಯೋತ್ಪಾದಕ ಸಂಘಟನೆಗಳ ನಂಟು ಇದ್ದು, ಈತ ಸೌದಿ, ಯಮನ್, ಹಾಗೂ ಮಧ್ಯ ಪ್ರಾಚ್ಯ ದೇಶಗಳ ಪ್ರವಾಸದಲ್ಲಿ ಭಯೋತ್ಪಾದಕ ಸಂಘಟನೆಯ ಮುಖಂಡರನ್ನು ಭೇಟಿಯಾಗಿರುವ ಫೋಟೋ ಹಂಚಿಕೊಂಡಿದ್ದು, ಇದರೊಂದಿಗೆ ಈ ವ್ಯಕ್ತಿಯು ಭಾರತದ ಚಟುವಟಿಕೆಗಳನ್ನು ಅರಬ್ ದೇಶಗಳಿಗೆ ರವಾನಿಸುವ ದೇಶದ್ರೋಹಿ ಕೆಲಸದ ಬಗ್ಗೆ ಟ್ವಿಟ್ಟರ್ ನಲ್ಲಿ ತಿಳಿಸಿದ್ದಾರೆ. ಹಾಗಾಗಿ ಇದು ದೇಶದ ಆಂತರಿಕ ಭದ್ರತೆಗೆ ಸವಾಲಾಗಿದ್ದು, ಈ ಪ್ರಕರಣವನ್ನು ಉನ್ನತ ಮಟ್ಟದ ತನಿಖೆಗೆ ಒಳಪಡಿಸಲು ಕ್ರಮಕೈಗೊಳ್ಳುವಂತೆ ಮನವಿ ಮಾಡಲಾಯಿತು.

ಈ ಸಂದರ್ಭದಲ್ಲಿ ವಿಶ್ವ ಹಿಂದೂ ಪರಿಷತ್‌ನ ಜಿಲ್ಲಾ ಕಾರ್ಯದರ್ಶಿ ಪಿ ರುದ್ರೇಶ್ ಬಜರಂಗದಳದ ಜಿಲ್ಲಾ ಸಹ ಸಂಯೋಜಕ್, ಬಾಲಕೃಷ್ಣ ನಗರ ಸಹ ಕಾರ್ಯದರ್ಶಿ, ರಂಗಸ್ವಾಮಿ ನಗರ ಸಂಯೋಜಕರು ರಂಗನಾಥ್, ನಗರ ಸಹಸಯೋಜಕರಾದ ಕಿಶೋರ್ ಹಾಗೂ ಕಾರ್ಯಕರ್ತರಾದ ರೇಣು, ಪ್ರಮೋದ್, ಸಂಪತ್, ದೀಪಕ್ ರಾಜ್ ಇತರರು ಇದ್ದರು.

## ರಾಜ್ಯಮಟ್ಟದ ಆರ್ಯಈಡಿಗರ ಜನಜಾಗೃತಿ ಸಮಾವೇಶ
# ಚಳ್ಳಕೆರೆ ತಾಲ್ಲೂಕಿನಿಂದ ಸಾವಿರಾರು ಭಾಗಿ

» **ಚಳ್ಳಕೆರೆ**




ರಾಜ್ಯಮಟ್ಟದ ಆರ್ಯಈಡಿಗರ ಜನಜಾಗೃತಿ ಸಮಾವೇಶ ಮತ್ತು ಈಡಿಗರ ಹಾಸ್ಟಲ್‌ನ ಅಮೃತ ಮಹೋತ್ಸವ ಕಾರ್ಯಕ್ರಮ ಡಿ.10ರ ಭಾನುವಾರ ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿದ್ದು ಕಾರ್ಯಕ್ರಮದಲ್ಲಿ ತಾಲ್ಲೂಕಿನಿಂದ ಸುಮಾರು ಒಂದು ಸಾವಿರಕ್ಕೂ ಹೆಚ್ಚು ಈಡಿಗ ಸಮಾಜದ ಬಂಧುಗಳು ಭಾಗವಹಿಸುವರು ಎಂದು ತಾಲ್ಲೂಕು ಈಡಿಗ ಸಮಾಜದ ಅಧ್ಯಕ್ಷ ಸಿ.ಒ.ರವಿಕುಮಾರ್ ತಿಳಿಸಿದರು.

ಅವರು, ಶುಕ್ರವಾರ ನಗರದ ಗುರುನಾರಾಯಣ ಭವನದಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ರಾಜ್ಯಮಟ್ಟದ ಆರ್ಯಈಡಿಗ ಜನಜಾಗೃತಿ ಸಮಾವೇಶದಿಂದ ಈಡಿಗ ಸಮಾಜದ ಸರ್ವತೋಮುಖ ಅಭಿವೃದ್ಧಿ ಹಾಗೂ ಸಂಘಟನೆಯ ಬಗ್ಗೆ ಸಮಾಜದ ಹಿರಿಯರು ಮಾರ್ಗದರ್ಶನ ನೀಡುವರು. ಈ ನಿಟ್ಟಿನಲ್ಲಿ ಅತಿಹೆಚ್ಚಿನ ಸಂಖ್ಯೆಯಲ್ಲಿ ಸಮಾಜದ ಬಂಧುಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು. ಸಂಘದ ವತಿಯಿಂದ ಬೆಂಗಳೂರಿಗೆ ಹೋಗಲು ಬಸ್ ವ್ಯವಸ್ಥೆ ಮಾಡಲಾಗಿದೆ. ಸಮಾಜದ ಎಲ್ಲಾ ಬಂಧುಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಅವರು ಮನವಿ ಮಾಡಿದರು.

ಪೂರ್ವಭಾವಿ ಸಭೆಯಲ್ಲಿ ಖಜಾಂಚಿ ಜಿ.ಎ.ಪ್ರಕಾಶ್, ಯುವ ಘಟಕದ ಉಪಾಧ್ಯಕ್ಷ ನೇತಾಜಿ ಪ್ರಸನ್ನ, ಪ್ರಧಾನ ಕಾರ್ಯದರ್ಶಿ ಕೃಷ್ಣಮೂರ್ತಿ, ಸಂಘಟನಾ ಕಾರ್ಯದರ್ಶಿ ಗಿರೀಶ್, ನಗರಸಭಾ ಸದಸ್ಯ ಟಿ.ಮಲ್ಲಿಕಾರ್ಜುನ್, ಬೇಕರಿಮಂಜುನಾಥ, ಬೇಕರಿವಿಜಯಕುಮಾರ್, ಗ್ರಾಮ ಪಂಚಾಯಿತಿ ಸದಸ್ಯ ಮನ್ನೇಕೋಟೆ ರವಿ, ಮಾಜಿ ಸದಸ್ಯ ರಾಮಚಂದ್ರಪ್ಪ, ಆನಂದ, ರಾಜಣ್ಣ, ವೆಂಕಟಸ್ವಾಮಿ, ಗಂಗಾಧರ, ಗುರುಸ್ವಾಮಿ, ವೆಂಕಟೇಶ್, ವಿಠಲ, ಗಿರೀಶ್ ಮುಂತಾದವರು ಭಾಗವಹಿಸಿದ್ದರು.



**ಹೊಸದುರ್ಗ ಪಟ್ಟಣದ ಸರ್ಕಾರಿ ಪದವಿ ಕಾಲೇಜು ಪ್ರೌಢಶಾಲಾ ವಿಭಾಗದ ವತಿಯಿಂದ ಆಯೋಜಿಸಲಾಗಿದ್ದ ಪೋಷಕರ ಮತ್ತು ವಿದ್ಯಾರ್ಥಿಗಳ ಮಹತ್ವದ ಸಭೆಯಲ್ಲಿ ಮಕ್ಕಳು ತಮ್ಮ ತಮ್ಮ ತಾಯಂದಿರ ಪಾದ ಪೂಜೆ ಮಾಡಿ ಆಶೀರ್ವಾದ ಪಡೆದುಕೊಂಡರು.**

## ಅಂಬೇಡ್ಕರ್‌ರವರ ಆದರ್ಶಗಳೇ ನಮಗೆ ಶ್ರೀರಕ್ಷೆ : ತಿಪ್ಪೇಸ್ವಾಮಿ



» **ಚಳ್ಳಕೆರೆ**

ಸಂವಿಧಾನ ಶಿಲ್ಪಿ ಬಿ.ಆರ್.ಅಂಬೇಡ್ಕರ್‌ರವರ 67ನೇ ಪರಿನಿರ್ವಾಣ ದಿನಾಚರಣೆಯನ್ನು ದೇಶದೆಲ್ಲೆಡೆ ಆಚರಣೆ ಮಾಡುತ್ತಿದ್ದು, ಪ್ರತಿಯೊಬ್ಬ ನಾಗರೀಕನೂ ಅಂಬೇಡ್ಕರ್‌ರವರ ಆದರ್ಶಗಳನ್ನು ಮೈಗೂಡಿಸಿಕೊಂಡು ಪ್ರಗತಿಯತ್ತ ಹೆಜ್ಜೆ ಇಡಬೇಕೆಂದು ಜಿಲ್ಲಾ ಗ್ರಂಥಾಲಯಾಧಿಕಾರಿ ಪಿ.ಆರ್. ತಿಪ್ಪೇಸ್ವಾಮಿ ತಿಳಿಸಿದರು.

ಅವರು, ಶುಕ್ರವಾರ ನಗರದ ಶ್ರೀಕೃಷ್ಣರಾಜೇಂದ್ರ ಗ್ರಂಥಾಲಯದಲ್ಲಿ ಅಂಬೇಡ್ಕರ್‌ರವರ ಪರಿನಿರ್ವಾಣ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಇಂದು ಭಾರತ ದೇಶ ಅಭಿವೃದ್ಧಿ ಪಥದತ್ತ ಮುನ್ನಡೆಯುತ್ತಿದೆ. ದೇಶದ ಜನರಿಗೆ ಸಾಮಾಜಿಕ ನ್ಯಾಯದ ಪರಿಕಲ್ಪನೆಯನ್ನು ನೀಡಿದವರು ಡಾ.ಬಿ.ಆರ್.ಆಂಬೇಡ್ಕರ್‌ರವರು. ನಾವೆಲ್ಲರೂ ರಾಷ್ಟ್ರದ ಸಂವಿಧಾನವನ್ನು ಹೇಗೆ ಗೌರವಿಸುತ್ತೆಯೋ ಅದೇ ರೀತಿ ಅಂಬೇಡ್ಕರ್‌ರವರನ್ನು ಸಹ ಸದಾಗೌರವಿಸಬೇಕು ಎಂದರು.

ಚಿಂತಕ ಮೈತ್ರಿದ್ಯಾಮಣ್ಣ ಮಾತನಾಡಿ, ದೇಶದ ಅಮೃತ ಮಹೋತ್ಸವದ ಸಂದರ್ಭದಲ್ಲೂ ನಾವು ಶೋಷಣೆ ಮುಕ್ತರಾಗಿಲ್ಲವೆಂಬುವುದು ನೋವಿನ ಸಂಗತಿ. ಅಂಬೇಡ್ಕರ್‌ರವರ ತತ್ವ ಸಿದ್ಧಾಂತಗಳನ್ನು ಪಾಲಿಸುವಲ್ಲಿ ಅನೇಕ ಲೋಪನಾವು ಕಾಣಬಹುದು. ಅಂಬೇಡ್ಕರ್‌ರವರು ಅನೇಕ ಸಂಕಷ್ಟಗಳನ್ನು ಎದುರಿಸಿ ದೇಶಕ್ಕಾಗಿ ಸಂವಿಧಾನದವನ್ನು ಕೊಡುಗೆಯಾಗಿ ನೀಡಿದ್ದಾರೆ. ಸಂವಿಧಾನ ಇಂದು ವಿಶ್ವಮಟ್ಟದಲ್ಲಿ ಖ್ಯಾತಿಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಗ್ರಂಥಾಲಯಾಧಿಕಾರಿ ಡಿ.ತಿಮ್ಮರಾಯಪ್ಪ, ಟಿ.ತಿಪ್ಪೇಸ್ವಾಮಿ, ಸಿ.ವೈ.ಗಂಗಾಧರ, ಧನಂಜಯ, ಈ.ವೀರಭದ್ರಪ್ಪ, ತಿಪ್ಪೇರುದ್ರಪ್ಪ, ಮಾರುತಿ, ರೂಪ ಮುಂತಾದವರು ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

# ಅಂಬೇಡ್ಕರ್ ಟ್ರಾಕ್ಟರ್ ಮಾಲೀಕರ ಸಂಘ ಉದ್ಘಾಟನೆ

» **ಚಿತ್ರದುರ್ಗ**



ನಿಮ್ಮ ಸಮಸ್ಯೆಗಳ ಜೊತೆ ಸದಾ ನಾವಿರುತ್ತೇವೆ. ಕಾನೂನು ಪರಿಪಾಲನೆ ಮಾಡಿ ಎಂದು ಮಾಜಿ ಶಾಸಕ ಜಿ.ಹೆಚ್. ತಿಪ್ಪಾರೆಡ್ಡಿ ಟ್ರಾಕ್ಟರ್ ಮಾಲೀಕರುಗಳಿಗೆ ತಿಳಿಸಿದರು.

ಮೆದೇಹಳ್ಳಿರಸ್ತೆಯಲ್ಲಿರುವ ರಾಮತೀರ್ಥ ಆಶ್ರಮ ಟ್ರಸ್ಟ್ ಹತ್ತಿರ ಶುಕ್ರವಾರ ಡಾ.ಬಿ.ಆರ್. ಅಂಬೇಡ್ಕರ್ ಟ್ರಾಕ್ಟರ್ ಮಾಲೀಕರ ಸಂಘ ಉದ್ಘಾಟಿಸಿ ಮಾತನಾಡಿದರು.

ಕೆಲವೊಮ್ಮೆ ನೀವುಗಳು ಟ್ರಾಕ್ಟರ್‌ನಲ್ಲಿ ಜೆಲ್ಲಿ, ಮರಳು, ಇಟ್ಟಿಗೆಗಳನ್ನು ಸಾಗಿಸುತ್ತಿರುವಾಗ ಸಂಬಂಧಪಟ್ಟವರು ಹಿಡಿದು ತಪಾಸಣೆ ನಡೆಸಿ ದಾಖಲೆ ಹಾಗೂ ಪರ್ಮಿಟ್ ಇಲ್ಲದಿದ್ದರೆ ದಂಡ ವಿಧಿಸುವುದು ಸಹಜ. ಹಾಗಾಂತ ಮಿತಿ ಮೀರಿ ದಂಡವನ್ನು ವಿಧಿಸಬಾರದು. ಕೆಲವೊಮ್ಮೆ ವಾರ್ನಿಂಗ್ ಮಾಡಿ ಕಳಿಸಬೇಕು. ಇಲಾಖೆಯವರ ಸಹಕಾರ ನಿಮಗಿರಬೇಕು. ನಿಮ್ಮ ಸಹಕಾರ ಇಲಾಖೆಯವರಿಗಿರಬೇಕು. ಡಾ.ಬಿ.ಆರ್.ಅಂಬೇಡ್ಕರ್‌ರವರ ಹೆಸರಿನಲ್ಲಿ ಸಂಘ ಕಟ್ಟಿದ್ದೀರಿ ಖಂಡಿತ ನಿಮಗೆ ಒಳ್ಳೆಯದಾಗುತ್ತದೆ ಎಂದು ಹಾರೈಸಿದರು.

ಡಾ.ಬಿ.ಆರ್.ಅಂಬೇಡ್ಕರ್ ಯಾವುದೆ ಒಂದು ಜಾತಿಗೆ ಸೀಮಿತವಾಗಿಲ್ಲ. ಭಾರತದಲ್ಲಿ ಅನೇಕ ಜಾತಿ, ಧರ್ಮ, ಭಾಷೆಗಳಿವೆ, ಎಲ್ಲರೂ ಅವರವರ ಸಂಸ್ಕೃತಿಯನ್ನು ಆಚರಿಸುವುದರಲ್ಲಿ ತಪ್ಪಿಲ್ಲ. ಸಣ್ಣಪುಟ್ಟ ವ್ಯತ್ಯಾಸಗಳು ಬಂದಾಗ ಸರಿಪಡಿಸಿಕೊಂಡು ಬದುಕಬೇಕು. ಸಂವಿಧಾನದಲ್ಲಿ ಸರ್ವರಿಗೂ ಸಮಾನತೆ ಇರುವುದರಿಂದ ಭಾರತ ಒಗ್ಗಟ್ಟಾಗಿದೆ. ನೆಹರು ಅಂಬೇಡ್ಕರ್‌ಗೆ ವ್ಯತ್ಯಾಸ ಬಂದಾಗ ಅಂಬೇಡ್ಕರ್ ಮಂತ್ರಿ ಸ್ಥಾನ ತ್ಯಜಿಸಿ ಹೊರಬಂದರು. ಮಹಿಳೆಯರಿಗೆ ಹಿಂದೂ ಕೋಡ್‌ಬಿಲ್ ತಂದಾಗ ಪಾರ್ಲಿಮೆಂಟ್‌ನಲ್ಲಿ ಬಿದ್ದೋಗುತ್ತದೆ. ಚುನಾವಣೆಯಲ್ಲಿ ಅಂಬೇಡ್ಕರ್‌ರನ್ನು ಸೋಲಿಸಿದವರು ಕಾಂಗ್ರೆಸ್‌ನವರು ಎನ್ನುವುದನ್ನು ನೆನಪಿಸಿಕೊಂಡರು.

ಮಡಿವಾಳ ಗುರುಪೀಠದ ಡಾ. ಬಸವ ಮಡಿವಾಳ ಮಾಚಿದೇವಸ್ವಾಮೀಜಿ ಮಾತನಾಡುತ್ತ ಶ್ರಮಿಕ ವರ್ಗ ಚನ್ನಾಗಿರಬೇಕು. ಹನ್ನೆರಡನೆಶತಮಾನದಲ್ಲಿಬಸವಣ್ಣಹಾಗೂ ಅವರಸಮಕಾಲೀನರಕಾಲದಲ್ಲಿಜಾತಿಯತೆ ಇರಲಿಲ್ಲ. ಕಾಯಕದ ಮೇಲೆ ಬದುಕಿದ್ದಂತ ಶ್ರಮಿಕ ವರ್ಗದವರಿದ್ದರು. ಜಾತಿಯಿಂದ ಬದುಕಲು ಯಾರಿಂದಲೂ ಆಗಲ್ಲ. ಸಮೃದ್ಧ ಕಾಲ ಅದು. ಪ್ರಾಮಾಣಿಕವಾಗಿ ಎಲ್ಲರೂ ದುಡಿದು ಊಟ ಮಾಡುತ್ತಿದ್ದರು ಎಂದು ಸ್ಮರಿಸಿದರು. ಚಾಲಕರುಗಳೆಂದು ಉದಾಸೀನ ಮಾಡಿದರೆ ಮುಂದಿನ ದಿನ ಗಳಲ್ಲಿ ಯಾರು ಕೆಲಸಗಾರರೆ ಸಿಗುವುದಿಲ್ಲ. ರೈತ ಹೇಗೆ ದೇಶದ ಬೆನ್ನೆಲುಬು ಎಂದು ಕರೆಯಲಾಗುತ್ತದೋ ಅದೇ ರೀತಿ ಚಾಲಕ ರೈತನ ಬೆನ್ನೆಲುಬು ಎನ್ನಬೇಕಾಗುತ್ತದೆ. ಟ್ರಾಕ್ಟರ್ ಚಾಲನೆ ಕಲಿತರೆ ಎಲ್ಲಾ ವಾಹನಗಳನ್ನು ಓಡಿಸಬಹುದು. ಟ್ರಾಕ್ಟರ್ ಮಾಲೀಕರು ಹಾಗೂ ಚಾಲಕರುಗಳು ಮೊದಲು ಸಂಘಟನೆಯಾದರೆ ಎಲ್ಲರೂ ನಿಮ್ಮನ್ನು ನೋಡಿ ಹೆದರುತ್ತಾರೆಂದು ಡಾ.ಬಿ.ಆರ್.ಅಂಬೇಡ್ಕರ್ ಟ್ರಾಕ್ಟರ್ ಮಾಲೀಕರ ಸಂಘದವರಿಗೆ ಕರೆ ನೀಡಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T